ಸಂಪುಟ : 11 ಸಂಚಿಕೆ: 132 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 132 Pages : 4+2 Price : 3.00 Friday june 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಾರ್ತಾ ಇಲಾಖೆಯ ಆಯುಕ್ತರಾಗಿ ಡಿಐಜಿ ಎಂ.ಎನ್. ಅನುಚೇತ್ ಅಧಿಕಾರ ಸ್ವೀಕಾರ



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಆಯುಕ್ತರಾಗಿ ಐಪಿಎಸ್ ಅಧಿಕಾರಿ ಡಿಐಜಿ ಎಂ.ಎನ್. ಅನುಚೇತ್ ಅವರು ಗುರುವಾರ ಅಧಿಕಾರ ಸ್ವೀಕರಿಸಿದರು.

ಇದುವರೆಗೆ ಇಲಾಖೆಯ ಆಯುಕ್ತರಾಗಿದ್ದ ಹಿರಿಯ ಐಪಿಎಸ್ ಅಧಿಕಾರಿ ಹಾಗೂ ಎಡಿಜಿಪಿ ಹೇಮಂತ್ ಎಂ. ನಿಂಬಾಳ್ಕರ್ ಅವರು ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ನೂತನ ಆಯುಕ್ತರಿಗೆ ಶುಭ ಹಾರೈಸಿದರು.

ಸರ್ಕಾರವು ಎಂ.ಎನ್. ಅನುಚೇತ್ ಅವರಿಗೆ ವಾರ್ತಾ ಇಲಾಖೆಯ ಜೊತೆಗೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಆಯುಕ್ತರ ಹೆಚ್ಚುವರಿ ಪ್ರಭಾರವನ್ನೂ ವಹಿಸಿದೆ.

ಕೋಲಾರ ಜಿಲ್ಲೆಯ ಮೂಲದ ಎಂ.ಎನ್. ಅನುಚೇತ್ ಅವರು ಬೆಂಗಳೂರಿನ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಪದವಿ ಪಡೆದಿದ್ದು, 2008ರ ಸಿವಿಲ್ ಸರ್ವಿಸ್ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿ, 2009ರ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಪಿಎಸ್ ಅಧಿಕಾರಿಯಾಗಿ ಆಯ್ಕೆಯಾಗಿದ್ದರು.

2011ರಲ್ಲಿ ಪುತ್ತೂರಿನಲ್ಲಿ ಸಹಾಯಕ ಪೊಲೀಸ್ ಅಧೀಕ್ಷಕರಾಗಿ ಸೇವೆ ಆರಂಭಿಸಿದ ಅವರು, ಸಿಐಡಿ ಎಸ್ಪಿ, ಬೆಂಗಳೂರು ಕೇಂದ್ರ ವಿಭಾಗದ ಡಿಸಿಪಿ ಹಾಗೂ ಇತ್ತೀಚೆಗೆ ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಸೇರಿದಂತೆ ವಿವಿಧ ಪ್ರಮುಖ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. ಸಂಚಾರ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಅಳವಡಿಕೆಗೆ ಮಹತ್ವದ ಕೊಡುಗೆ ನೀಡಿದ ಅವರು, ಅತ್ಯುತ್ತಮ ತನಿಖಾ ಕಾರ್ಯಕ್ಕಾಗಿ ಕೇಂದ್ರ ಗೃಹ ಸಚಿವರ ಪದಕಕ್ಕೂ ಭಾಜನರಾಗಿದ್ದಾರೆ.

ಈ ಸಂದರ್ಭದಲ್ಲಿ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ಡೊಳ್ಳಿನ್, ಸಿದ್ದೇಶ್ವರಪ್ಪ ಜಿ.ಬಿ., ಸಿ.ಆರ್. ನವೀನ್, ಉಪನಿರ್ದೇಶಕರಾದ ಬಿ.ಕೆ. ರಾಮಲಿಂಗಪ್ಪ, ಶಫಿ ಸಾದುದ್ದಿನ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಜೂನ್ 28ರಿಂದ ಧಾರ್ಮಿಕ ವೈಭವ: ರಥದ ಹೆಸರು ವಿವಾದಕ್ಕೂ ಸಿದ್ದಪ್ಪ ಪಲ್ಲೇದ ಸ್ಪಷ್ಟನೆ

# ಗಂಗಾಪೂರಪೇಟೆ ಜಾತ್ರೆಗೆ ಅದ್ಧೂರಿ ಸಿದ್ಧತೆ..!

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಐತಿಹಾಸಿಕ ಗಂಗಾಪೂರಪೇಟೆಯ ಶ್ರೀ ದುರ್ಗಾದೇವಿ ಜಾತ್ರಾ ಮಹೋತ್ಸವ ಹಾಗೂ ಬೆಳ್ಳಿ ಮೂರ್ತಿ ಪ್ರತಿಷ್ಠಾಪನಾ ಮಹೋತ್ಸವ ಜೂನ್ 28ರಿಂದ ಜುಲೈ 13ರವರೆಗೆ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಸಿದ್ದಪ್ಪ ಪಲ್ಲೇದ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರೆಯ ಅಂಗವಾಗಿ ಜುಲೈ 4ರಂದು ಕಳಸಾರೋಹಣ, ಜುಲೈ 7ರಂದು ಉಡಿ ತುಂಬುವ ಕಾರ್ಯಕ್ರಮ, ಜುಲೈ 8ರಂದು ಮಹಾರಥೋತ್ಸವ, ಜುಲೈ 9ರಂದು ಲಘು ರಥೋತ್ಸವ ಹಾಗೂ ಜುಲೈ 10ರಂದು ಸಾಮೂಹಿಕ ವಿವಾಹ ಮತ್ತು ಮಹಾ ಅನ್ನಸಂತರ್ಪಣೆ ಸೇರಿದಂತೆ ಪ್ರಮುಖ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ

> "31 ಲಕ್ಷ ರೂಪಾಯಿ ವೆಚ್ಚದಲ್ಲಿ ರಥ ನಿರ್ಮಾಣ ಮಾಡಿಕೊಟ್ಟ ದಾನಿಗಳ ಹೆಸರನ್ನು ಕೆತ್ತಿಸಿರುವುದರಲ್ಲಿ ಯಾವುದೇ ತಪ್ಪಿಲ್ಲ. ಇದು ಅವರ ಭಕ್ತಿಯ ಸಂಕೇತ."
> **– ಸಿದ್ದಪ್ಪ ಪಲ್ಲೇದ, ಅಧ್ಯಕ್ಷರು, ಶ್ರೀ ದುರ್ಗಾದೇವಿ ಜಾತ್ರಾ ಮಹೋತ್ಸವ ಸಮಿತಿ**




ಎಂದು ಹೇಳಿದರು.

ಜೂನ್ 28ರಿಂದ ಜುಲೈ 13ರವರೆಗೆ ಹೋಮ–ಹವನ, ದೇವಿಯ ಸಹಸ್ರನಾಮಾವಳಿ ಪಠಣ, ಧಾರ್ಮಿಕ ಪ್ರವಚನಗಳು, ಆರೋಗ್ಯ ಶಿಬಿರ, ಸಾಂಸ್ಕೃತಿಕ ಕಾರ್ಯಕ್ರಮಗಳು, ನಾಟಕ, ರೈತರಿಗೆ ಜಾಗೃತಿ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದು ಮನವಿ ಮಾಡಿದರು.

ದುರ್ಗಾದೇವಿಯ ಬೆಳ್ಳಿ ಮೂರ್ತಿ ಉದ್ಘಾಟನಾ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಶ್ರೀ ಷ.ಬ್ರ. ಡಾ. ಗುರುಸಿದ್ಧವೀರ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದು, ಡಾ. ಪರಮೇಶ ಕಲ್ಲನಗೌಡರ ಉಪನ್ಯಾಸ ನೀಡಲಿದ್ದಾರೆ. ಟ್ರಸ್ಟ್ ಅಧ್ಯಕ್ಷ ಎಂ.ಎಸ್. ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಮಾಜಿ ಶಾಸಕ ಡಿ.ಆರ್. ಪಾಟೀಲ, ಆನಂದಸ್ವಾಮಿ ಗಡ್ಡದೇವರಮಠ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಇದೇ ವೇಳೆ ರಥ ನಿರ್ಮಾಣಕ್ಕೆ ದೇಣಿಗೆ ನೀಡಿದ ಪೀರಸಾಬ್ ಕೌತಾಳ್ ದಂಪತಿಯನ್ನು ಸನ್ಮಾನಿಸಲಾಗುವುದು ಎಂದರು.

**ರಥದ ಮೇಲಿನ ಹೆಸರು ವಿವಾದಕ್ಕೆ ಸ್ಪಷ್ಟನೆ**

ದುರ್ಗಾದೇವಿ ರಥದ ಗಾಲಿಯ ಮೇಲೆ ಅನ್ಯಧರ್ಮೀಯ ಮಹಿಳೆಯ ಹೆಸರು ಕೆತ್ತನೆ ಮಾಡಿರುವ ಕುರಿತು ಹಿಂದೂ ಮುಖಂಡ ರಾಜು ಖಾನಪ್ಪನವರ ಮಾಡಿದ್ದ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿದ್ದಪ್ಪ ಪಲ್ಲೇದ, "ನವರಾತ್ರಿ ಉತ್ಸವದ ವೇಳೆ ಪೀರಸಾಬ್ ಕೌತಾಳ್ ಅವರು ರಥ ನಿರ್ಮಿಸಿಕೊಡುವುದಾಗಿ ಭರವಸೆ ನೀಡಿದ್ದರು. ಅದರಂತೆ ಸುಮಾರು ₹31 ಲಕ್ಷ ವೆಚ್ಚದಲ್ಲಿ ರಥ ನಿರ್ಮಾಣ ಮಾಡಿಕೊಟ್ಟಿದ್ದಾರೆ. ದಾನಿಗಳ ಹೆಸರನ್ನು ರಥದ ಮೇಲೆ ಕೆತ್ತಿಸಿರುವುದರಲ್ಲಿ ಯಾವುದೇ ತಪ್ಪಿಲ್ಲ" ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಅನಿಲಕುಮಾರ ಸಿದ್ದಮ್ಮನಹಳ್ಳಿ, ಈಶ್ವರ ಕೋಟೆ, ರವಿ ಶಿದ್ಲಿಂಗ್, ಎಂ.ಎಸ್. ಪಾಟೀಲ, ಬಸವರಾಜ ಬೆಳದಡಿ, ಯಮನಪ್ಪ ಗೊಂದಿ, ಬಸಪ್ಪ ಶಿರೂರ, ದೇವಪ್ಪ ಹುರಕಟ್ಟಿ, ಹುಲಿಗೆಪ್ಪ ಜಡಿ, ಬಸವರಾಜ ಅಣ್ಣಿಗೇರಿ, ಶರಣಪ್ಪ ಗಾಣಿಗೇರ, ಬಸವರಾಜ ಕವಳಿಕಾಯಿ, ಬಸವರಾಜ ಹಿತ್ತಲಗುತ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮೂರು ರಾಜ್ಯಗಳ ರೈತರ ಹಿತಕ್ಕೆ ಐತಿಹಾಸಿಕ ತೀರ್ಮಾನ ಎಂದ ಸಿಎಂ ಡಿ.ಕೆ. ಶಿವಕುಮಾರ್


# ತುಂಗಭದ್ರೆಯ 33 ಕ್ರಸ್ಟ್ ಗೇಟ್‌ಗಳ ಲೋಕಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜಲಸಂಪನ್ಮೂಲ ಇಲಾಖೆ ಹಾಗೂ ತುಂಗಭದ್ರಾ ಮಂಡಳಿಯ ಜಂಟಿ ಸಹಯೋಗದಲ್ಲಿ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಲಾದ 33 ಕ್ರಸ್ಟ್ ಗೇಟ್‌ಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಲೋಕಾರ್ಪಣೆ ಮಾಡಿದರು.

ಬಳಿಕ ಮುನಿರಾಬಾದ್‌ನ ಸರ್ಕಾರಿ ಪ್ರೌಢಶಾಲೆ ಮೈದಾನದಲ್ಲಿ ನಡೆದ ಬೃಹತ್ ಸಾರ್ವಜನಿಕ ಸಮಾರಂಭದಲ್ಲಿ ಮಾತನಾಡಿದ ಅವರು, ಶಾರದಾ ದೇವಿ, ಹುಲಿಗೆಮ್ಮ, ಹುಚ್ಚರಾಯಸ್ವಾಮಿ, ಹಂಪಿಯ ವಿರೂಪಾಕ್ಷ ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳ ಆಶೀರ್ವಾದದಿಂದ ಈ ಮಹತ್ವದ ಯೋಜನೆ ಸಾಕಾರಗೊಂಡಿದೆ ಎಂದು ಹೇಳಿದರು.

33 ಕ್ರಸ್ಟ್ ಗೇಟ್‌ಗಳ ಅಳವಡಿಕೆಯಿಂದ ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ರೈತರ ಹಿತಾಸಕ್ತಿಯನ್ನು ಕಾಪಾಡಲು ಸಾಧ್ಯವಾಗಲಿದೆ.




ಮುಖ್ಯಮಂತ್ರಿಯಾಗಿದ್ದರೂ ತಾನು ಜನರ ಸೇವಕ ಹಾಗೂ ರೈತರ ಬಂಧು ಎಂಬ ಜವಾಬ್ದಾರಿಯನ್ನು ಎಂದಿಗೂ ಮರೆಯುವುದಿಲ್ಲ ಎಂದು ತಿಳಿಸಿದರು.

ತುಂಗಭದ್ರಾ ಜಲಾಶಯದಲ್ಲಿ 33 ಟಿಎಂಸಿ ನೀರು ಸಂರಕ್ಷಣೆ, ನವಲಿ ಸಮನಾಂತರ ಜಲಾಶಯ ನಿರ್ಮಾಣ ಹಾಗೂ ಹೂಳೆತ್ತುವಿಕೆ ಸೇರಿದಂತೆ ಹಲವು ವಿಷಯಗಳ ಕುರಿತು ಕೇಂದ್ರ ಜಲಶಕ್ತಿ ಸಚಿವರು ಹಾಗೂ ಮೂರು ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಈ ಕುರಿತು ಐತಿಹಾಸಿಕ ಒಮ್ಮತ ಮೂಡಿದ್ದು, ಅಂತಿಮ ತೀರ್ಮಾನವನ್ನು ಕೇಂದ್ರ ಜಲಶಕ್ತಿ ಸಚಿವರು ಪ್ರಕಟಿಸಲಿದ್ದಾರೆ ಎಂದು ಹೇಳಿದರು.

ನೀರಿನ ಹಂಚಿಕೆ ಹಾಗೂ ರೈತರ ಹಿತಾಸಕ್ತಿಗೆ ಸಂಬಂಧಿಸಿದಂತೆ ನಡೆದ ಈ ಚರ್ಚೆ ದೇಶದ ನೀರಾವರಿ ಮತ್ತು ಒಕ್ಕೂಟ ವ್ಯವಸ್ಥೆಯ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದು ಸಿಎಂ ಅಭಿಪ್ರಾಯಪಟ್ಟರು.

ರೈತನಿಗೆ ಸಂಬಳ, ಬಡ್ತಿ, ಪಿಂಚಣಿ ಅಥವಾ ರಜೆ ಯಾವುದೂ ಇಲ್ಲ. ಇಂತಹ ಪರಿಸ್ಥಿತಿಯಲ್ಲೂ ದೇಶಕ್ಕೆ ಅನ್ನ ನೀಡುವ ರೈತರ ಬದುಕನ್ನು ಉಳಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಈ ಭಾಗದ ಭತ್ತದ ಕಣಜವನ್ನು ರಕ್ಷಿಸುವ ದೃಢ ಸಂಕಲ್ಪವನ್ನು ಸರ್ಕಾರ ಕೈಗೊಂಡಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ, ಮಾಜಿ ಸಚಿವ ಎಚ್.ಕೆ. ಪಾಟೀಲ, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ವಿವಿಧ ಗಣ್ಯರು ಉಪಸ್ಥಿತರಿದ್ದರು.

## ಅಬಕಾರಿ ಪೊಲೀಸರ ದಾಳಿ: ಸೇಂದಿ ಸಾಗಿಸುತ್ತಿದ್ದ ಆರೋಪಿ ಬಂಧನ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಅಕ್ರಮವಾಗಿ ಸೇಂದಿ ಸಾಗಾಟ ಮಾಡುತ್ತಿದ್ದಾಗ ಅಬಕಾರಿ ಪೊಲೀಸರು ದಾಳಿ ಮಾಡಿ ಬಂಧಿಸಿದ್ದಾರೆ. ಬಂಧಿತನಿಂದ 32 ಲೀಟರ್ ಸೇಂದಿ ಹಾಗೂ ದ್ವಿಚಕ್ರ ವಾಹನವನ್ನು ಜಪ್ತಿ ಮಾಡಿ ಪ್ರಕರಣ ದಾಖಲಿಸಿದ್ದಾರೆ.

ಅಬಕಾರಿ ಅಪರ ಆಯುಕ್ತರು (ಜಾರಿ ಮತ್ತು ಅಪರಾಧ) ಬೆಳಗಾವಿ, ಅಬಕಾರಿ ಜಂಟಿ ಆಯುಕ್ತರು (ಜಾರಿ ಮತ್ತು ತನಿಖೆ) ಹೊಸಪೇಟೆ ವಿಭಾಗ, ಅಬಕಾರಿ ಉಪ ಆಯುಕ್ತರು ವಿಜಯನಗರ ಜಿಲ್ಲೆ ಹಾಗೂ ಅಬಕಾರಿ ಉಪ ಅಧೀಕ್ಷಕರ ಮಾರ್ಗದರ್ಶನದಲ್ಲಿ ಈ ಕಾರ್ಯಾಚರಣೆ ನಡೆಸಲಾಯಿತು.

ಜೂನ್ 24ರಂದು ರಾತ್ರಿ ಸುಮಾರು 8.30 ಗಂಟೆಗೆ ತಾಲೂಕಿನ ಹೊಸ ಆನಂದದೇವನಹಳ್ಳಿ ಗ್ರಾಮದ ಚಂದ್ರು ಡಾಬಾ ಸಮೀಪ ಅಬಕಾರಿ



ಉಪನಿರೀಕ್ಷಕ–1 ಮಹಾಂತೇಶ್ ಸವಳಿ ಹಾಗೂ ಸಿಬ್ಬಂದಿ ದಾಳಿ ನಡೆಸಿದರು.

ಈ ವೇಳೆ ಕಂದು ಬಣ್ಣದ ಟಿವಿಎಸ್ ಜೂಪಿಟರ್ ಕ್ಲಾಸಿಕ್ (ನೋಂದಣಿ ಸಂಖ್ಯೆ ಎಂ–41 ಇಜ–0511) ದ್ವಿಚಕ್ರ ವಾಹನದಲ್ಲಿ ಮಾರಾಟ ಉದ್ದೇಶದಿಂದ 32 ಲೀಟರ್ ಸೇಂದಿ ಸಾಗಾಟ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಲಾಯಿತು. ಆತನಿಂದ ಸೇಂದಿ ಹಾಗೂ ವಾಹನವನ್ನು ಜಪ್ತಿ ಮಾಡಲಾಯಿತು.

ಆರೋಪಿಯ ವಿರುದ್ಧ ಅಬಕಾರಿ ಕಾಯ್ದೆಯಡಿ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ಪ್ರಥಮ ವರ್ತಮಾನ ವರದಿ ಸಲ್ಲಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಅಬಕಾರಿ ಉಪನಿರೀಕ್ಷಕ ಮಹಾಂತೇಶ್ ಸವಳಿ ಹಾಗೂ ವಲಯ ಕಚೇರಿಯ ಸಿಬ್ಬಂದಿ ವಿಠ್ಠಲ್ ಗೋಸ್ಲೀ ಸೇರಿದಂತೆ ಸಿಬ್ಬಂದಿ ಭಾಗವಹಿಸಿದ್ದರು.

### ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಂದ ಜಾಗೃತಿ ಅಭಿಯಾನಕ್ಕೆ ಚಾಲನೆ

# ಉದ್ಯೋಗ ಸೃಷ್ಟಿಗೆ ಎಂಎಸ್‌ಎಂಇ ಮಹತ್ವ

**■ವಿಜಯಸಾಕ್ಷಿ ಸುದ್ದಿ, ಗದಗ**

ಜೂನ್ 27ರಂದು ದೇಶಾದ್ಯಂತ ಆಚರಿಸಲಾಗುವ ರಾಷ್ಟ್ರವ್ಯಾಪಿ ಎಂಎಸ್‌ಎಂಇ (MSME) ದಿನಾಚರಣೆ–2026 ಅಂಗವಾಗಿ ಗದಗ ಜಿಲ್ಲೆಯಲ್ಲಿ ಜಾಗೃತಿ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಎಂಎಸ್‌ಎಂಇ ಕ್ಷೇತ್ರವು ಉದ್ಯೋಗ ಸೃಷ್ಟಿ, ಉದ್ಯಮಶೀಲತೆ ಅಭಿವೃದ್ಧಿ ಹಾಗೂ ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಜೂನ್ 27ರಂದು ನಡೆಯುವ ದಿನಾಚರಣೆಯಲ್ಲಿ ಉದ್ಯಮಿಗಳು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸುವಂತೆ ಕರೆ ನೀಡಿದರು. ಬಳಿಕ ಎಂಎಸ್‌ಎಂಇ ದಿನಾಚರಣೆ – 2026ರ ಜಾಗೃತಿ ಪೋಸ್ಟರ್‌ಗಳನ್ನು ಅನಾವರಣಗೊಳಿಸಲಾಯಿತು.



ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಮಹತ್ವ, ಉದ್ಯಮಿಗಳಿಗೆ ಲಭ್ಯವಿರುವ ವಿವಿಧ ಸರ್ಕಾರಿ ಯೋಜನೆಗಳು ಹಾಗೂ ಬ್ಯಾಂಕಿಂಗ್ ಸೌಲಭ್ಯಗಳ ಕುರಿತು ಅರಿವು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ. ಹಾಗೂ ವಿವಿಧ ಬ್ಯಾಂಕ್‌ಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಳೆಗಾಗಿ ಕರಗಲ್ಲುಗಳಿಗೆ ಜಲಾಭಿಷೇಕ..!



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿ ಸಮೃದ್ಧ ಬೆಳೆ ಬರಲಿ ಎಂದು ಪ್ರಾರ್ಥಿಸಿ ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ರೈತರು ಹಾಗೂ ಗ್ರಾಮಸ್ಥರು ಒಗ್ಗೂಡಿ ಊರಿನ ಕರಗಲ್ಲುಗಳಿಗೆ ಜಲಾಭಿಷೇಕ ಹಾಗೂ ವಿಶೇಷ ಪೂಜೆ ಸಲ್ಲಿಸಿದರು.

ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಯಾವುದೇ ಅಡೆತಡೆ ಇಲ್ಲದೆ ಸಾಗಲಿ, ಅನ್ನದಾತರ ಬದುಕು ಹಸನಾಗಲಿ ಎಂಬ ಸಂಕಲ್ಪದೊಂದಿಗೆ ಗ್ರಾಮಸ್ಥರು ಭಕ್ತಿಭಾವದಿಂದ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಗ್ರಾಮದ ಜಂಗಮ ವಂಶಸ್ಥರಾದ ಮಲ್ಲಯ್ಯ, ಪಂಚಯ್ಯ ಹಾಗೂ ಡಿ.ಎಂ. ಪ್ರವೀಣ ಸ್ವಾಮಿ ಅವರು ಶಾಸ್ತ್ರೋಕ್ತವಾಗಿ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು.

"ಪ್ರತಿವರ್ಷದಂತೆ ಈ ವರ್ಷವೂ ಸಕಾಲಕ್ಕೆ ಉತ್ತಮ ಮಳೆಯಾಗಿ ಭೂಮಿ ತಾಯಿ ಹಸಿರಿನಿಂದ ಕಂಗೊಳಿಸಲಿ. ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿ ಎಂಬುದು ಈ ವಿಶೇಷ ಪೂಜೆಯ ಸಂಕಲ್ಪ" ಎಂದು ಗ್ರಾಮದ ಹಿರಿಯ ಮಹಾಬಲೇಶ್ವರ ಸ್ವಾಮಿ ತಿಳಿಸಿದರು.

ಈ ಸಂದರ್ಭದಲ್ಲಿ ಟಿ. ಪಕ್ಕೀರಪ್ಪ, ಮ್ಯಾಗಳಮನಿ ಬಸವರಾಜಪ್ಪ, ಕಾತರಕಿ ಕೊಟ್ರೇಶ್, ಕೆಂಚಪ್ಪ, ಅಂಬರೀಶ, ಸಂತೋಷ, ದೊಡ್ಡಬಸಪ್ಪ, ಗಡೆದು ಕೊಟ್ರೇಶ್, ಆನೇಕಲ್ ವಿರೂಪಾಕ್ಷಪ್ಪ, ಚಣ್ಣದ ಮಲ್ಲಿಕಾರ್ಜುನ, ಸುಣಗಾರ ಮಾರುತಿ, ನಿಂಗರಾಜ, ಲೋಕೇಶ್, ಮಹೇಶ್ ಕಿನ್ನಾಳ, ರವಿ, ಅಸೂಳಿ ಮಾರುತಿ, ಹೊಳೆಯಪ್ಪ, ನವೀನ, ಪಟ್ಟಣಶೆಟ್ಟಿ ವೀರಬಸಪ್ಪ, ಬಸಯ್ಯ, ಮುದುಕಪ್ಪ, ಶಿವು, ಚನ್ನಪ್ಪ ಸೇರಿದಂತೆ ನೂರಾರು ರೈತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು. ಪೂಜೆ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

# ಕರವೇ ವೈದ್ಯಕೀಯ ಘಟಕಕ್ಕೆ ಡಾ. ಮಹಮ್ಮದ್ ಸಲೀಂ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ಘಟಕದ ಗದಗ ಜಿಲ್ಲಾ ಉಪಾಧ್ಯಕ್ಷರಾಗಿ ಡಾ. ಮಹಮ್ಮದ್ ಸಲೀಂ ಬಿ. ರಗಟಿ ಅವರನ್ನು ನೇಮಕ ಮಾಡಲಾಗಿದೆ.



ನಗರದ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಕರವೇ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ, ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ತೌಸಿಫ್ ಢಾಲಾಯತ ಹಾಗೂ ನರೇಗಲ್ಲ ಘಟಕದ ಅಧ್ಯಕ್ಷ ಸಿರಾಜ್ ಅವರ ಸಮ್ಮುಖದಲ್ಲಿ ಡಾ. ಮಹಮ್ಮದ್ ಸಲೀಂ ಬಿ. ರಗಟಿ ಅವರು ಕರ್ನಾಟಕ ರಕ್ಷಣಾ ವೇದಿಕೆಗೆ ಸೇರ್ಪಡೆಯಾದರು.

ಬಳಿಕ ಹನಮಂತಪ್ಪ ಎಚ್. ಅಬ್ಬಿಗೇರಿ ಅವರು ಡಾ. ಮಹಮ್ಮದ್ ಸಲೀಂ ಬಿ. ರಗಟಿ ಅವರನ್ನು ಕರವೇ ವೈದ್ಯಕೀಯ ಘಟಕದ ಗದಗ ಜಿಲ್ಲಾ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಪತ್ರ ನೀಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ನಾಡು, ನುಡಿ, ನೆಲ, ಜಲ ಹಾಗೂ ಜನರ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಶುಭ ಹಾರೈಸಲಾಯಿತು.

**ಗೋಕಾಕದಲ್ಲಿ ಶಂಕರಗೌಡ ಪಾಟೀಲರ 83ನೇ ವಿಶೇಷ ಪ್ರದರ್ಶನ ಉದ್ಘಾಟನೆ**

# ಮರೆಯದ ಮಾಣಿಕ್ಯರ ನೆನಪುಗಳ ಮಹಾಪ್ರದರ್ಶನ..!

■ವಿಜಯಸಾಕ್ಷಿ ಸುದ್ದಿ, ಗದಗ

ನಾವು ಕಣ್ಣಾರೆ ನೋಡಲು ಹಾಗೂ ಮಾತು ಕೇಳಲು ಸಾಧ್ಯವಾಗದ ಹಿರಿಯ ರಂಗಕಲಾವಿದರ ನೆನಪುಗಳನ್ನು ಮರುಕಳಿಸುವ ಅಪರೂಪದ ಪ್ರಯತ್ನ ಈ ಛಾಯಾಚಿತ್ರ ಪ್ರದರ್ಶನವಾಗಿದೆ ಎಂದು ಚಲನಚಿತ್ರ ಹಾಗೂ ಕಿರುತೆರೆ ನಟ ಅನಿರುದ್ಧ ಜತಕರ ಹೇಳಿದರು.



ಗೋಕಾಕದಲ್ಲಿ ಆಶಾಕಿರಣ ಕಲಾ ಟ್ರಸ್ಟ್, ಬೆಂಗಳೂರು ವತಿಯಿಂದ ಆಯೋಜಿಸಿದ್ದ 'ಮರೆಯದ ಮಾಣಿಕ್ಯ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗದುಗಿನ ಚಿತ್ರಕಲಾವಿದ ಶಂಕರಗೌಡ ಪಾಟೀಲ ಸಂಗ್ರಹಿಸಿ ಪ್ರದರ್ಶಿಸಿದ ನಾಡಿನ ಹಿರಿಯ ರಂಗಕಲಾವಿದರ ಛಾಯಾಚಿತ್ರಗಳು ಹಾಗೂ ಲೇಖನಗಳ 83ನೇ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಹಳೆಯ ಛಾಯಾಚಿತ್ರಗಳು ಮತ್ತು ಲೇಖನಗಳನ್ನು ಸಂಗ್ರಹಿಸಿ ಸಾರ್ವಜನಿಕರ ಮುಂದೆ ಪ್ರದರ್ಶಿಸುವ ಮೂಲಕ ನಾಡಿನ ಕಲೆ, ಸಂಸ್ಕೃತಿ ಹಾಗೂ ರಂಗಭೂಮಿ ಪರಂಪರೆಯನ್ನು ಯುವ ಪೀಳಿಗೆಗೆ ಪರಿಚಯಿಸುವ ಮಹತ್ವದ ಕಾರ್ಯ ನಡೆಯುತ್ತಿದೆ. ಇಂತಹ ಪ್ರದರ್ಶನಗಳು ಯುವಕರಿಗೆ ಪ್ರೇರಣೆ ಮತ್ತು ಮಾರ್ಗದರ್ಶನ ನೀಡುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಆಶಾಕಿರಣ ಕಲಾ ಟ್ರಸ್ಟ್ ಸಂಸ್ಥಾಪಕಿ, ಚಲನಚಿತ್ರ ಹಾಗೂ ಕಿರುತೆರೆ ನಟಿ ಮಾಲತಿಶ್ರೀ ಮೈಸೂರು, ರಾಜಕೀಯ ಧುರೀಣ ಅಶೋಕ ಪೂಜಾರ, ಪರಶುರಾಮ ಘಸ್ತೆ, ಪಾರಿಜಾತ ಕಲಾವಿದರಾದ ಟಿ. ಈಶ್ವರ, ಮಹಾಂತೇಶ ತವಂಶಿ, ಶ್ರೀಮತಿ ರಜನಿ ಜಿರಗಾಳ, ಶೈಲಜಾ ಕೊಕ್ಕರಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

'ಮರೆಯದ ಮಾಣಿಕ್ಯ ಪ್ರಶಸ್ತಿ-2026' ಪುರಸ್ಕೃತರಾದ ಆನಂದ ಭೀಮಪ್ಪ ಕಮತ, ರುದ್ರಪ್ಪ ವೈ. ಕರಿಗಾರ, ಬಸವರಾಜ ಕರಜಗಿಮಠ, ಸುನೀಲ ಪರಮಾರ, ಜಿ.ಕೆ. ಕಾಡೇಶಕುಮಾರ, ಬಸವರಾಜ ಪಟ್ಟಣಶೆಟ್ಟಿ, ವೀರೇಂದ್ರ ಮಧುಸೂದನ ಪತಕಿ, ಹಾಜಿ ಅಕ್ಬರಖಾನ್ ಜಮಾದಾರ, ಅಶೋಕ ಶಿವಾಜಿ ವೈದ್ಯ ಹಾಗೂ ಡಾ. ಶಾಂತಲಾ ಎಸ್. ಭರಭರಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಛಾಯಾಚಿತ್ರ ಪ್ರದರ್ಶನವನ್ನು ವೀಕ್ಷಿಸಿದರು.

**ಅಶೂರಾದ ಇತಿಹಾಸ, ಕರ್ಬಲಾದ ತ್ಯಾಗ ಮತ್ತು ಮಾನವೀಯ ಮೌಲ್ಯಗಳನ್ನು ಸಾರುವ ಪವಿತ್ರ ಮಾಸ**

# ಮೊಹರಂ: ತ್ಯಾಗ, ನ್ಯಾಯ ಮತ್ತು ಆತ್ಮಾವಲೋಕನದ ಸಂದೇಶ

ಮೊಹರಂ ಇಸ್ಲಾಮೀ ಹಿಜ್ರಿ ವರ್ಷದ ಮೊದಲ ತಿಂಗಳಾಗಿದ್ದು, ಮುಸ್ಲಿಮರಲ್ಲಿ ಅತ್ಯಂತ ಪವಿತ್ರ ಮಾಸಗಳಲ್ಲಿ ಒಂದಾಗಿದೆ. ಈ ತಿಂಗಳು ಹೊಸ ವರ್ಷದ ಆರಂಭ ಮಾತ್ರವಲ್ಲ, ತ್ಯಾಗ, ನ್ಯಾಯ, ಧೈರ್ಯ, ಕೃತಜ್ಞತೆ ಹಾಗೂ ಆತ್ಮಾವಲೋಕನದ ಸಂದೇಶವನ್ನು ಸಾರುವ ಮಹತ್ವದ ಸಂದರ್ಭವಾಗಿದೆ.



ಮೊಹರಂ ಹತ್ತನೇ ದಿನವಾದ ಅಶೂರಾ ದಿನವು ಇಸ್ಲಾಮಿನ ಇತಿಹಾಸದಲ್ಲಿ ವಿಶೇಷ ಸ್ಥಾನ ಪಡೆದಿದೆ. ಈ ದಿನ ಅಲ್ಲಾಹನು ಪ್ರವಾದಿ ಹಝ್ರತ್ ಮೂಸಾ (ಅ) ಮತ್ತು ಅವರ ಸಮುದಾಯವನ್ನು ಫಿರ್‌ಔನ್‌ನ ದಬ್ಬಾಳಿಕೆಯಿಂದ ಮುಕ್ತಗೊಳಿಸಿದನೆಂದು ಇಸ್ಲಾಮೀ ಸಂಪ್ರದಾಯ ತಿಳಿಸುತ್ತದೆ. ಈ ಕಾರಣದಿಂದ ಪ್ರವಾದಿ ಹಝ್ರತ್ ಮುಹಮ್ಮದ್ (ಸ) ಅವರು ಅಶೂರಾ ದಿನ ಉಪವಾಸ ಆಚರಿಸಿದ್ದು, ತಮ್ಮ ಅನುಯಾಯಿಗಳಿಗೂ ಉಪವಾಸ ಆಚರಿಸುವಂತೆ ಪ್ರೇರೇಪಿಸಿದ್ದರು.

ಪ್ರವಾದಿ ಮುಹಮ್ಮದ್ (ಸ) ಅವರು ಮಕ್ಕಾದಿಂದ ಮದೀನಾಕ್ಕೆ ಹಿಜ್ರತ್ ಮಾಡಿದ ಘಟನೆಯಿಂದಲೇ ಇಸ್ಲಾಮೀ ಹಿಜ್ರಿ ಕ್ಯಾಲೆಂಡರ್ ಆರಂಭವಾಗುತ್ತದೆ. ಆದ್ದರಿಂದ ಮೊಹರಂ ತಿಂಗಳು ಹೊಸ ವರ್ಷದ ಆರಂಭದೊಂದಿಗೆ ಆತ್ಮಶುದ್ಧಿ, ಸತ್ಕಾರ್ಯ ಮತ್ತು ದೇವಭಕ್ತಿಗೆ ಹೊಸ ಸಂಕಲ್ಪ ಮಾಡುವ ಪವಿತ್ರ ಸಮಯವೆಂದು ಪರಿಗಣಿಸಲಾಗುತ್ತದೆ.

ಮೊಹರಂ ತಿಂಗಳೊಂದಿಗೆ ಬೆಸೆದುಕೊಂಡ ಮತ್ತೊಂದು ಐತಿಹಾಸಿಕ ಘಟನೆಯೆಂದರೆ ಕರ್ಬಲಾ. ಪ್ರವಾದಿ ಮುಹಮ್ಮದ್ (ಸ) ಅವರ ಮೊಮ್ಮಗ ಹಝ್ರತ್ ಹುಸೈನ್ (ರ) ಅವರು ಅನ್ಯಾಯ ಮತ್ತು ದಬ್ಬಾಳಿಕೆಯ ವಿರುದ್ಧ ತಲೆಬಾಗದೆ ಸತ್ಯ ಹಾಗೂ ನ್ಯಾಯಕ್ಕಾಗಿ ತಮ್ಮ ಕುಟುಂಬದೊಂದಿಗೆ ತ್ಯಾಗ ಬಲಿದಾನ ನೀಡಿದರು. ಕರ್ಬಲಾದ ಈ ತ್ಯಾಗ ವಿಶ್ವ ಇತಿಹಾಸದಲ್ಲಿ ನ್ಯಾಯಕ್ಕಾಗಿ ನಡೆದ ಶ್ರೇಷ್ಠ ಹೋರಾಟಗಳಲ್ಲಿ ಒಂದಾಗಿ ಸ್ಮರಿಸಲ್ಪಡುತ್ತದೆ.

ಹಝ್ರತ್ ಹುಸೈನ್ (ರ) ಅವರ ಬಲಿದಾನವು ಅಧಿಕಾರಕ್ಕಾಗಿ ನಡೆದ ಹೋರಾಟವಲ್ಲ; ಸತ್ಯ, ನ್ಯಾಯ, ಧರ್ಮ ಮತ್ತು ಮಾನವೀಯ ಮೌಲ್ಯಗಳನ್ನು ಉಳಿಸುವ ಹೋರಾಟವಾಗಿತ್ತು. ಅದಕ್ಕಾಗಿಯೇ ಕರ್ಬಲಾದ ಸಂದೇಶ ಇಂದಿಗೂ ಎಲ್ಲ ಧರ್ಮಗಳ ಜನರಿಗೆ ಸ್ಫೂರ್ತಿಯಾಗಿದೆ.

ಇಸ್ಲಾಮೀ ಸಂಪ್ರದಾಯದ ಪ್ರಕಾರ ಮೊಹರಂ ತಿಂಗಳು ಹಲವು ಮಹತ್ವದ ಐತಿಹಾಸಿಕ ಘಟನೆಗಳಿಗೆ ಸಾಕ್ಷಿಯಾಗಿದೆ. ಪ್ರವಾದಿ ಆದಮ್ (ಅ) ಅವರ ಪಶ್ಚಾತ್ತಾಪವನ್ನು ಅಲ್ಲಾಹನು ಸ್ವೀಕರಿಸಿದ್ದು, ಪ್ರವಾದಿ ನೂಹ್ (ಅ) ಅವರ ಹಡಗು ಸುರಕ್ಷಿತವಾಗಿ ತಲುಪಿದ್ದು, ಪ್ರವಾದಿ ಇಬ್ರಾಹಿಂ (ಅ) ಅವರನ್ನು ಬೆಂಕಿಯಿಂದ ರಕ್ಷಿಸಿದ್ದು, ಪ್ರವಾದಿ ಯೂನುಸ್ (ಅ) ಮೀನಿನ ಹೊಟ್ಟೆಯಿಂದ ಹೊರಬಂದದ್ದು ಹಾಗೂ ಪ್ರವಾದಿ ಮೂಸಾ (ಅ) ಮತ್ತು ಅವರ ಸಮುದಾಯಕ್ಕೆ ವಿಮೋಚನೆ ದೊರೆತದ್ದು ಸೇರಿದಂತೆ ಹಲವು ಘಟನೆಗಳನ್ನು ಈ ತಿಂಗಳೊಂದಿಗೆ ಸಂಬಂಧಿಸಿ ಸ್ಮರಿಸಲಾಗುತ್ತದೆ.

ಮೊಹರಂ ಎಂದರೆ ಕೇವಲ ಶೋಕಾಚರಣೆ ಅಥವಾ ಸಂಭ್ರಮಾಚರಣೆ ಮಾತ್ರವಲ್ಲ. ಅದು ಸತ್ಯದ ಪರವಾಗಿ ನಿಲ್ಲುವ, ಅನ್ಯಾಯವನ್ನು ವಿರೋಧಿಸುವ, ತ್ಯಾಗದ ಮೌಲ್ಯವನ್ನು ಅರ್ಥಮಾಡಿಕೊಳ್ಳುವ ಮತ್ತು ಆತ್ಮಾವಲೋಕನ ನಡೆಸುವ ಪವಿತ್ರ ಕಾಲವಾಗಿದೆ. ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ನ್ಯಾಯ ಸ್ಥಾಪಿಸುವ ಪ್ರೇರಣೆಯನ್ನು ಈ ಮಾಸ ನೀಡುತ್ತದೆ.

ಮೊಹರಂ ನಮಗೆ ಧರ್ಮದ ಮೂಲ ಸಂದೇಶಗಳಾದ ಸತ್ಯ, ನ್ಯಾಯ, ಸಹನೆ, ತ್ಯಾಗ ಮತ್ತು ದೇವಭಕ್ತಿಯನ್ನು ನೆನಪಿಸುವ ಪವಿತ್ರ ಮಾಸವಾಗಿದೆ. ಈ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಮೊಹರಂ ಆಚರಣೆಯ ನಿಜವಾದ ಉದ್ದೇಶ ಸಾರ್ಥಕವಾಗುತ್ತದೆ.

**- ಡಾ. ತಯಬಅಲಿ ಎ. ಹೊಂಬಳ**
ಮಕ್ಕಳ ಸಾಹಿತಿ, ಗದಗ

**ಜಿಲ್ಲಾಧಿಕಾರಿ ಕಚೇರಿ ಎದುರು ನಿವಾಸಿಗಳ ಪ್ರತಿಭಟನೆ, ಸ್ಲಂ ಎಂದು ಘೋಷಿಸಲು ಆಗ್ರಹ**

# ಸಿದ್ದಲಿಂಗೇಶ್ವರ ನಗರಕ್ಕೆ ಹಕ್ಕುಪತ್ರ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಯಡಿಯೂರ ಶ್ರೀ ಸಿದ್ದಲಿಂಗೇಶ್ವರ ನಗರದ ನಿವಾಸಿಗಳಿಗೆ ಹಕ್ಕುಪತ್ರ ನೀಡಬೇಕು ಹಾಗೂ ಪ್ರದೇಶವನ್ನು ಸ್ಲಂ ಎಂದು ಘೋಷಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿ ಶ್ರಮಿಕರ, ಕೂಲಿ ಕಾರ್ಮಿಕರ, ನೇಕಾರರ ಹಾಗೂ ರೈತರ ಹೋರಾಟ ಸಮಿತಿಯ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.



ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಮಂಜುನಾಥ ಎಚ್. ಮುಳಗುಂದ ಅವರ ಮುಂದಾಳತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದವರು ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ನಡೆಸಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ದ್ವಾರಬಾಗಿಲ ಬಳಿ ಧರಣಿ ನಡೆಸಿ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು.

ಈ ವೇಳೆ ಮಾತನಾಡಿದ ಮಂಜುನಾಥ ಮುಳಗುಂದ, ಗದಗ-ಬೆಟಗೇರಿ ಅವಳಿ ನಗರದ ವಾರ್ಡ್ ನಂ. 6ರ ವ್ಯಾಪ್ತಿಯ ಯಡಿಯೂರ ಸಿದ್ದಲಿಂಗೇಶ್ವರ ನಗರದಲ್ಲಿ ಕಳೆದ 25 ವರ್ಷಗಳಿಂದ 400ಕ್ಕೂ ಹೆಚ್ಚು ಕುಟುಂಬಗಳು ವಾಸಿಸುತ್ತಿದ್ದು, ಇದುವರೆಗೂ ಯಾವುದೇ ಮೂಲಭೂತ ಸೌಲಭ್ಯಗಳು ದೊರೆತಿಲ್ಲ ಎಂದು ಆರೋಪಿಸಿದರು.

> "25 ವರ್ಷಗಳಿಂದ ವಾಸಿಸುತ್ತಿರುವ ಬಡ ಕುಟುಂಬಗಳಿಗೆ ಹಕ್ಕುಪತ್ರವೂ ಇಲ್ಲ, ಮೂಲಭೂತ ಸೌಲಭ್ಯಗಳೂ ಇಲ್ಲ. ಸಿದ್ದಲಿಂಗೇಶ್ವರ ನಗರವನ್ನು ಸ್ಲಂ ಎಂದು ಘೋಷಿಸಿ ಜನರ ಬದುಕಿಗೆ ಭದ್ರತೆ ಕಲ್ಪಿಸಬೇಕು."
> **- ಮಂಜುನಾಥ ಎಚ್. ಮುಳಗುಂದ,**
> ಹೋರಾಟ ಸಮಿತಿ ಅಧ್ಯಕ್ಷ

ಈ ಪ್ರದೇಶದಲ್ಲಿ ಕೂಲಿ ಕಾರ್ಮಿಕರು, ಬಡವರು, ನಿರ್ಗತಿಕರು ಹಾಗೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದಾರೆ. ಆದರೆ ರಸ್ತೆ ಗಟಾರ, ಕುಡಿಯುವ ನೀರು, ಬೀದಿ ದೀಪ ಸೇರಿದಂತೆ ಅಗತ್ಯ ಸೌಲಭ್ಯಗಳಿಂದ ವಂಚಿತರಾಗಿದ್ದು, ಜನರು ಸಂಕಷ್ಟದ ಬದುಕು ನಡೆಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಿವಾಸಿಗಳಿಗೆ ಹಕ್ಕುಪತ್ರ ಹಾಗೂ ಮನೆಗಳ ಉತಾರ (ಫಾರ್ಮ್ ನಂ. 3) ಇಲ್ಲದ ಕಾರಣ ಅನೇಕ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಹೀಗಾಗಿ ಯಡಿಯೂರ ಸಿದ್ದಲಿಂಗೇಶ್ವರ ನಗರವನ್ನು ಸ್ಲಂ ಪ್ರದೇಶವೆಂದು ಘೋಷಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಇಲ್ಲವಾದರೆ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಶಂಕ್ರಪ್ಪ ಮಾಳಶೆಟ್ಟಿ, ಮುತ್ತು ರೊಟ್ಟಿ, ಬಸೀರ್ ಚಿನ್ನೂರ, ಪ್ರಶಾಂತ್ ಅಣ್ಣಿಗೇರಿ, ಮಲ್ಲಪ್ಪ ಕಾಯಕಟ್ಟಿ, ಮಂಜುನಾಥ ಬ್ಯಾಳಿ, ರಾಜು ಸಿಂಗಾಡೆ, ಅಭಿಷೇಕ್ ನವಲೆ, ಮಂಜುನಾಥ ಬಡಿಗೇರ, ಸಂತೋಷ ದಿವೂಟೆ, ರವಿ ದಿವೂಟೆ, ಮುತ್ತು ಛಲವಾದಿ, ನಾರಾಯಣ ಖಾಟವಾ, ಮಲ್ಲೇಶ ಜಂತ್ಲಿ ಸೇರಿದಂತೆ ಹಲವರು ಭಾಗವಹಿಸಿದ್ದರು.

**ಆದ್ರಳ್ಳಿ ಗ್ರಾಮದಲ್ಲಿ ಅಂಬಿಗ ಗಂಗಾಮತ ಸಮುದಾಯದ ಜಾಗೃತಿ ಸಭೆಯಲ್ಲಿ ಸಂಗಮೇಶ ಹಾದಿಮನಿ**

# ಶಿಕ್ಷಣ-ಸಂಘಟನೆಯಿಂದ ಸಮಾಜದ ಅಭಿವೃದ್ಧಿ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಆರ್ಥಿಕ, ಸಾಮಾಜಿಕ, ರಾಜಕೀಯ ಹಾಗೂ ಧಾರ್ಮಿಕವಾಗಿ ಉನ್ನತ ಸ್ಥಾನಕ್ಕೇರಬೇಕಾದರೆ ಶಿಕ್ಷಣ ಮತ್ತು ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅಂಬಿಗ ಗಂಗಾಮತ ಸಮುದಾಯದ ಯುವ ನಾಯಕ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಸಂಗಮೇಶ ಹಾದಿಮನಿ ಹೇಳಿದರು.



ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಆದ್ರಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಅಂಬಿಗ ಗಂಗಾಮತ ಸಮುದಾಯದ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಸಮುದಾಯದ ವಿದ್ಯಾರ್ಥಿಗಳ ಶಿಕ್ಷಣ ಹಾಗೂ ಆರ್ಥಿಕ ಪ್ರಗತಿಗೆ ಹೊಸ ಯೋಜನೆಗಳನ್ನು ರೂಪಿಸುವಲ್ಲಿ ಸಮಾಜದ ಮುಖಂಡರು ಮುಂದಾಗಬೇಕು ಎಂದು ಕರೆ ನೀಡಿದರು.

ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ ಉತ್ತಮ ಶಿಕ್ಷಣ ನೀಡುವುದು ಮುಖ್ಯ. ಉತ್ತಮ ಶಿಕ್ಷಣ ಮತ್ತು ಸಂಸ್ಕಾರದಿಂದಲೇ ಸಮಾಜದ ಭವಿಷ್ಯ ಉಜ್ವಲವಾಗುತ್ತದೆ. ಸಮಾಜದ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರಿ ಸಂಘಟನೆಗಳು ಬಲ ತುಂಬಲಿದ್ದು, ಸಮುದಾಯ ಆರ್ಥಿಕವಾಗಿ ಸದೃಢಗೊಳ್ಳಲು ಸಂಘಟನೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಸಮುದಾಯದ ಜನರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣ ಸಾಧ್ಯವಾಗುತ್ತದೆ. ಯುವಜನತೆ ಶಿಕ್ಷಣದ ಜೊತೆಗೆ ಸಂಘಟನೆಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

> "ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ ಉತ್ತಮ ಶಿಕ್ಷಣ ನೀಡುವುದು ದೊಡ್ಡ ಸಂಪತ್ತು. ಶಿಕ್ಷಣ ಮತ್ತು ಸಂಘಟನೆಯಿಂದಲೇ ಸಮಾಜದ ಸಮಗ್ರ ಅಭಿವೃದ್ಧಿ ಸಾಧ್ಯ."
> **- ಸಂಗಮೇಶ ಹಾದಿಮನಿ**

ಸಭೆಯಲ್ಲಿ ಸಮುದಾಯದ ಅಧ್ಯಕ್ಷ ಶಂಕರಗೌಡ ರಾ. ಪಾಟೀಲ, ಮಹಾಂತಗೌಡ ಪಾಟೀಲ, ಗುಡದಯ್ಯ ಅಂಬಿಗೇರ, ಈರನಗೌಡ ರಾಹುತ, ಶಂಭುಗೌಡ ಪಾಟೀಲ, ಸುದೀಪ ಕಮತರ, ಮಹಾಂತೇಶ ಪಾಟೀಲ, ಸುಭಾಸಗೌಡ ಪಾಟೀಲ, ಶೋಭಕ್ಕ ಪಾಟೀಲ, ದೀಪಾ ಮಾಗಳ, ನೀಲವ್ವ ಪಾಟೀಲ, ಜಯಮ್ಮ ಪಾಟೀಲ, ನಿರ್ಮಲವ್ವ ಪಾಟೀಲ, ಸತ್ಯೆವ್ವ ತಳವಾರ, ಮಂಜಪ್ಪ ಸುಣಗಾರ, ಲಲಿತಾ ರಾಹುತ, ಯಮನೂರಗೌಡ ಪಾಟೀಲ, ಮಹಾದೇವಕ್ಕ ಪಾಟೀಲ, ಭೀಮವ್ವ ಪಾಟೀಲ ಸೇರಿದಂತೆ ಸಮಾಜದ ಮುಖಂಡರು ಹಾಗೂ ಬಾಂಧವರು ಉಪಸ್ಥಿತರಿದ್ದರು.

**ಮಕ್ಕಳಲ್ಲಿ ಓದುವ ಅಭಿರುಚಿ ಬೆಳೆಸಲು ಜಾಗೃತಿ ಅಭಿಯಾನ, ಮೊಬೈಲ್ ದಾಸ್ಯದಿಂದ ದೂರವಿರಲು ಕರೆ**

# ಮೊಬೈಲ್ ಮಾಯಾಜಾಲದಿಂದ ಮಕ್ಕಳನ್ನು ಕಾಪಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೊಬೈಲ್‌ನ ಅತಿಯಾದ ಬಳಕೆಯಿಂದ ಮಕ್ಕಳು ಓದು, ಆಟ ಹಾಗೂ ಸೃಜನಾತ್ಮಕ ಚಟುವಟಿಕೆಗಳಿಂದ ದೂರವಾಗುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳಲ್ಲಿ ಓದುವ ಅಭಿರುಚಿ ಬೆಳೆಸುವ ಉದ್ದೇಶದಿಂದ ತಾಲ್ಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ವತಿಯಿಂದ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಸೋಮವಾರ 'ಮೊಬೈಲ್ ಬಿಡಿ, ಪುಸ್ತಕ ಹಿಡಿ' ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಾಜೇಂದ್ರ ಗಡಾದ, ಹಿಂದೆ ಮಕ್ಕಳು ಮೈದಾನಗಳಲ್ಲಿ ಆಟವಾಡುತ್ತ, ಪುಸ್ತಕಗಳೊಂದಿಗೆ ಸಮಯ ಕಳೆಯುತ್ತ ಬಾಲ್ಯವನ್ನು ಸವಿಯುತ್ತಿದ್ದರು. ಆದರೆ ಇಂದು ಮೊಬೈಲ್ ಎಂಬ ಮಾಯಾ ಯಂತ್ರ ಮಕ್ಕಳ ಬಾಲ್ಯವನ್ನೇ ಕಸಿದುಕೊಳ್ಳುತ್ತಿದೆ. ಮೊಬೈಲ್ ಬಳಕೆಯಿಂದ ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಸಮಸ್ಯೆಗಳು ಹೆಚ್ಚುತ್ತಿದ್ದು, ಓದಿನ ಮೇಲಿನ ಆಸಕ್ತಿ ಕುಗ್ಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

> "ಮಕ್ಕಳ ಕೈಯಲ್ಲಿ ಮೊಬೈಲ್‌ಗಿಂತ ಪುಸ್ತಕ ಇದ್ದರೆ ಜ್ಞಾನ ಬೆಳೆಯುತ್ತದೆ, ಮೊಬೈಲ್ ದಾಸ್ಯದಿಂದ ಹೊರಬಂದಾಗ ಮಾತ್ರ ಅವರ ಪ್ರತಿಭೆ ಅರಳುತ್ತದೆ."
> **- ರಾಜೇಂದ್ರ ಗಡಾದ,**
> ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರು

ಮಕ್ಕಳನ್ನು ಮೊಬೈಲ್ ಚಟದಿಂದ ದೂರವಿಟ್ಟು ಪುಸ್ತಕಗಳತ್ತ ಸೆಳೆಯುವುದು ಪೋಷಕರು, ಶಿಕ್ಷಕರು ಹಾಗೂ ಸಮಾಜದ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಮಾತನಾಡಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಓದುವ ಸಂಸ್ಕೃತಿ ಬೆಳೆಸಲು ಮತ್ತು ಮೊಬೈಲ್ ಬಳಕೆಯನ್ನು ನಿಯಂತ್ರಿಸಲು ಶಿಕ್ಷಣ ಇಲಾಖೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ತಿಳಿಸಿದರು.

ತಾಲೂಕು ಅಕ್ಷರದಾಸೋಹ ಅಧಿಕಾರಿ ಎಚ್.ಎಸ್. ರಾಮನಗೌಡ್ರ ಮಾತನಾಡಿ, ಮಕ್ಕಳು ಮೊಬೈಲ್ ಬಳಕೆಗೆ ಮೀಸಲಿಡುವ ಸಮಯವನ್ನು ಪುಸ್ತಕ ಓದುವುದಕ್ಕೆ ಬಳಸಿದರೆ ಜ್ಞಾನ, ಏಕಾಗ್ರತೆ ಹಾಗೂ ಚಿಂತನಾ ಶಕ್ತಿ ವೃದ್ಧಿಯಾಗುತ್ತದೆ ಎಂದು ಹೇಳಿದರು.

ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಪ್ರಾಸ್ತಾವಿಕವಾಗಿ ಮಾತನಾಡಿ, ಮೊಬೈಲ್ ದಾಸ್ಯದ ದುಷ್ಪರಿಣಾಮಗಳ ಕುರಿತು ಮಕ್ಕಳಲ್ಲಿ ಅರಿವು ಮೂಡಿಸಿ ಓದಿನತ್ತ ಪ್ರೇರೇಪಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ತಾಲ್ಲೂಕಿನ ಎಲ್ಲ ಶಾಲೆಗಳಲ್ಲಿ ಹಂತ ಹಂತವಾಗಿ ಈ ಅಭಿಯಾನ ನಡೆಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿ.ಆರ್. ಲಕ್ಕುಂಡಿಮಠ, ಡಾ. ಎಸ್.ಜಿ. ಹೂವಿನ, ಶ್ರೀನಿವಾಸ ಮತ್ತೂರ, ಉಮೇಶ ನೇಕಾರ, ಐ.ಎಸ್. ಮಡಿವಾಳರ, ಎಸ್.ಎನ್. ಕ್ಷತ್ರಿಯ, ಎಚ್.ಡಿ. ನಿಂಗರೆಡ್ಡಿ, ಆರ್.ಎಂ. ಶಿರಹಟ್ಟಿ, ಎಲ್.ಎ. ಬಣಕಾರ ಹಾಗೂ ಆರ್.ಕೆ. ಉಪನಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ವೇಳೆ ಬೆಂಗಳೂರಿನ ಚಿತ್ರಸಂತೆ ಸಂಘಟನೆಯಿಂದ 'ಶ್ರೇಷ್ಠ ಕನ್ನಡಿಗ ಪ್ರಶಸ್ತಿ' ಪಡೆದ ಶಂಕರ ಸಿಳ್ಳಿನ ಅವರನ್ನು ಸನ್ಮಾನಿಸಲಾಯಿತು. ಮೊಬೈಲ್ ಬಳಕೆಯ ದುಷ್ಪರಿಣಾಮಗಳನ್ನು ಬಿಂಬಿಸುವ ರೂಪಕ ಪ್ರದರ್ಶನ ಎಲ್ಲರ ಗಮನ ಸೆಳೆಯಿತು.

# ಯೋಗದಲ್ಲಿ ಆರೋಗ್ಯದ ಜೊತೆಗೆ ವಿಜ್ಞಾನ ಅಡಗಿದೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ, ಅದರೊಳಗೆ ಆರೋಗ್ಯಕರ ಬದುಕಿನ ವಿಜ್ಞಾನ ಅಡಗಿದ್ದು, ಪ್ರತಿಯೊಬ್ಬರೂ ಯೋಗವನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಯೋಗ ಸಾಧಕ ಶ್ರೀಧರ್ ಕೊಟಗಿ ಹೇಳಿದರು.

ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಯೋಗಾಭ್ಯಾಸದಿಂದ ದೇಹ ಮತ್ತು ಮನಸ್ಸಿನ ಸಮತೋಲನ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಂಸ್ಥೆಯ ಮುಖ್ಯಸ್ಥೆ ಸ್ವಾತಿ ಉ. ಪೈ ಮಾತನಾಡಿ, ಯೋಗವು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಶಾಂತಿ, ಏಕಾಗ್ರತೆ ಹಾಗೂ ಆತ್ಮವಿಶ್ವಾಸವನ್ನು ವೃದ್ಧಿಸುತ್ತದೆ. ವಿದ್ಯಾರ್ಥಿಗಳು ನಿತ್ಯ ಯೋಗಾಭ್ಯಾಸ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಭುಗೌಡ ಯಕಿಕೊಪ್ಪ ಅವರು ಆರೋಗ್ಯಕರ ಜೀವನಶೈಲಿಗೆ ಯೋಗದ ಮಹತ್ವವನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಕರಾದ ಮೃತ್ಯುಂಜಯ ಹಿರೇಮಠ, ಆರ್.ಎಂ. ಕದಡಿ ಹಾಗೂ ರಾಜು ಲಮಾಣಿ ಅವರು ವಿದ್ಯಾರ್ಥಿಗಳಿಗೆ ವಿವಿಧ ಯೋಗಾಸನಗಳ ಪ್ರಾತ್ಯಕ್ಷಿಕೆ ನಡೆಸಿ ಯೋಗಾಭ್ಯಾಸ ಮಾಡಿಸಿದರು.

ಜೆ.ಡಿ. ಲಮಾಣಿ ಕಾರ್ಯಕ್ರಮ ನಿರೂಪಿಸಿದರೆ, ವಿಜಯಕುಮಾರ್ ಬಿಳಿಯಲಿ ವಂದಿಸಿದರು. ಡಾ. ಶಿವಾನಂದ ಹೂವಿನ, ಸುಮಿತ್ರಾ ಹೂಗಾರ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಮಕ್ಕಳ ಸುರಕ್ಷತೆಗೆ ಚಾಲಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆ; ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ

# ಶಾಲಾ ವಾಹನಗಳಿಗೆ ಬ್ರೇಕ್..!

**■ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಮಕ್ಕಳ ಸುರಕ್ಷಿತ ಸಂಚಾರಕ್ಕೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಗದಗ ಶಹರ ವಲಯದ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಶಾಲಾ ವಾಹನಗಳ ಚಾಲಕರು ಮತ್ತು ನಿರ್ವಾಹಕರ ಸಭೆ ನಗರದ ಶಹರ ಸಂಪನ್ಮೂಲ ಕೇಂದ್ರದಲ್ಲಿ ನಡೆಯಿತು.

ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿ ಅರುಣಕುಮಾರ ಕಟ್ಟಿಮನಿ ಮಾತನಾಡಿ, ಶಾಲಾ ವಾಹನಗಳ ಸುರಕ್ಷತೆ, ಸಂಚಾರ ನಿಯಮಗಳ ಪಾಲನೆ ಹಾಗೂ ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಹಲವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಶಾಲಾ ವಾಹನ ಚಾಲಕರು ಅತಿ ಜಾಗರೂಕತೆಯಿಂದ ವಾಹನ ಚಲಾಯಿಸಬೇಕು. ಓವರ್‌ಟೇಕ್ ಮಾಡುವಾಗ ಅಥವಾ ಇತರ ವಾಹನಗಳನ್ನು ಹಿಂದಿಕ್ಕುವ ವೇಳೆ ಯಾವುದೇ ರೀತಿಯ ಅಜಾಗರೂಕತೆ ತೋರಬಾರದು. ಮಕ್ಕಳ ಸುರಕ್ಷತೆಯನ್ನೇ ಮೊದಲ ಆದ್ಯತೆಯಾಗಿ ಪರಿಗಣಿಸಿ ನಿಯಮಬದ್ಧವಾಗಿ ವಾಹನ ಚಲಾಯಿಸಬೇಕು ಎಂದು ಸೂಚಿಸಿದರು.



ವಾಹನಗಳಲ್ಲಿ ನಿಗದಿತ ಆಸನ ಸಾಮರ್ಥ್ಯಕ್ಕಿಂತ ಹೆಚ್ಚು ಮಕ್ಕಳನ್ನು ಕೂರಿಸಬಾರದು. ಶಾಲಾ ವಾಹನದ ವೇಗವನ್ನು ಗಂಟೆಗೆ 40 ಕಿ.ಮೀ. ಮಿತಿಯೊಳಗೆ ಕಾಯ್ದುಕೊಳ್ಳಬೇಕು. ವಾಹನಗಳ ಫಿಟ್ನೆಸ್ ಪ್ರಮಾಣಪತ್ರ, ವಿಮೆ ಹಾಗೂ ಇತರೆ ದಾಖಲೆಗಳನ್ನು ನಿಯಮಿತವಾಗಿ ನವೀಕರಿಸಿಕೊಂಡಿರಬೇಕು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಮಾತನಾಡಿ, ಶಾಲಾ ವಾಹನಗಳಲ್ಲಿ ಜಿಪಿಎಸ್ ವ್ಯವಸ್ಥೆ ಕಡ್ಡಾಯವಾಗಿದ್ದು, ಅಗ್ನಿಶಾಮಕ ಉಪಕರಣ ಹಾಗೂ ಪ್ರಥಮ ಚಿಕಿತ್ಸೆ ಪೆಟ್ಟಿಗೆ ಕಡ್ಡಾಯವಾಗಿ ಇರಬೇಕು ಎಂದು ಹೇಳಿದರು. ಚಾಲಕರಿಗೆ ಸಂಚಾರ ನಿಯಮಗಳ ಬಗ್ಗೆ ನಿರಂತರ ತರಬೇತಿ ಮತ್ತು ಅರಿವು ಮೂಡಿಸುವುದು ಅಗತ್ಯ ಎಂದು ಅಭಿಪ್ರಾಯಪಟ್ಟರು.

ಚಾಲಕರು ಮಕ್ಕಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ವಾಹನ ಚಾಲನೆಯ ವೇಳೆ ಮೊಬೈಲ್ ಫೋನ್ ಬಳಕೆ ಮಾಡಬಾರದು. ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ಅಜಾಗರೂಕ ಚಾಲನೆ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ವಾಹನಗಳ ತಾಂತ್ರಿಕ ಸ್ಥಿತಿ, ಬ್ರೇಕ್ ವ್ಯವಸ್ಥೆ, ಟೈರ್‌ಗಳ ಗುಣಮಟ್ಟ ಸೇರಿದಂತೆ ವಿವಿಧ ಸುರಕ್ಷತಾ ಅಂಶಗಳ ಕುರಿತು ಪರಿಶೀಲನೆ ನಡೆಸಲಾಯಿತು.

> "ಶಾಲಾ ಮಕ್ಕಳ ಸುರಕ್ಷತೆಯಲ್ಲಿ ಯಾವುದೇ ರಾಜಿ ಇಲ್ಲ. ವೇಗ ಮಿತಿ, ಜಿಪಿಎಸ್, ಫಸ್ಟ್ ಎಯ್ಡ್ ಕಿಟ್ ಸೇರಿದಂತೆ ಎಲ್ಲ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಉಲ್ಲಂಘನೆ ಕಂಡುಬಂದರೆ ಕಾನೂನು ಕ್ರಮ ಅನಿವಾರ್ಯ
>
> – **ಅರುಣಕುಮಾರ ಕಟ್ಟಿಮನಿ,** ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿ

ಸರ್ಕಾರ ಹಾಗೂ ಸಾರಿಗೆ ಇಲಾಖೆ ಹೊರಡಿಸಿರುವ ಎಲ್ಲ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಅಧಿಕಾರಿಗಳು ಸೂಚಿಸಿದರು.


ಸಭೆಯಲ್ಲಿ ಎಸ್.ಸಿ. ಪ್ರಭಯ್ಯನಮಠ, ಎಸ್. ಆರ್. ನದಾಫ್, ಎಂ.ಎ. ಯರಗುಡಿ, ಮುರಳಿ ಸೋಲಾಪುರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಅಧಿಕಾರಿಗಳು, ಗದಗ ನಗರ ಸಂಚಾರ ಪೊಲೀಸ್ ಠಾಣೆಯ ಅಧಿಕಾರಿಗಳು, ಶಾಲಾ ವಾಹನ ಚಾಲಕರು ಹಾಗೂ ನಿರ್ವಾಹಕರು ಭಾಗವಹಿಸಿದ್ದರು.

# ರಾಜ್ಯ ಪ್ರಶಸ್ತಿಗೆ ಬಾಲ ಪ್ರತಿಭೆ ಸಾನ್ವಿ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ವಿ.ವಿ.ಎಸ್. ಎಂ.ಪಿ. ಪ್ರಕಾಶ್ ಶಾಲೆಯ 3ನೇ ತರಗತಿ ವಿದ್ಯಾರ್ಥಿನಿ ಕುಮಾರಿ ಕೆ.ಎಲ್. ಸಾನ್ವಿ, ಶ್ರೀ ವಾಲ್ಮೀಕಿ ಕಲಾ ಸೇವಾ ರಾಜ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಹೊಸಪೇಟೆಯ ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆ ವತಿಯಿಂದ 2025–26ನೇ ಸಾಲಿನ ಪ್ರಶಸ್ತಿಗೆ ಭರತನಾಟ್ಯ ವಿಭಾಗದಲ್ಲಿ ಅವರ ಪ್ರತಿಭೆಯನ್ನು ಗುರುತಿಸಿ ಆಯ್ಕೆ ಮಾಡಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷೆ ಅನುರಾಧ ವಾಲ್ಮೀಕಿ ತಿಳಿಸಿದ್ದಾರೆ.



ರಾಮನಗರದ ವೈ. ಜಯಂತಿ ಮಾಲ ಹಾಗೂ ಲಕ್ಷ್ಮಿಪತಿ ಕುಪ್ಪ ದಂಪತಿಯ ಪುತ್ರಿಯಾಗಿರುವ ಸಾನ್ವಿ, ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭರತನಾಟ್ಯ ಪ್ರದರ್ಶಿಸಿ ಮೆಚ್ಚುಗೆ ಗಳಿಸಿದ್ದು, ಹಂಪಿ ಉತ್ಸವ–2026ರ ವೇದಿಕೆಯಲ್ಲೂ ನೃತ್ಯ ಪ್ರದರ್ಶನ ನೀಡಿ ಹಲವು ಪ್ರಶಸ್ತಿಗಳನ್ನು ಪಡೆದಿದ್ದಾರೆ.

ಜೂನ್ 28ರಂದು ವಿಜಯನಗರ ಜಿಲ್ಲೆಯಲ್ಲಿ ನಡೆಯಲಿರುವ ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆಯ 13ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಸಾನ್ವಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಸಾನ್ವಿಯ ಸಾಧನೆಗೆ ಎಂ.ಪಿ. ಪ್ರಕಾಶ್ ಶಾಲೆಯ ಮುಖ್ಯಶಿಕ್ಷಕಿ ಮಧುಮತಿ ಹಾಗೂ ಶಿಕ್ಷಕರ ಬಳಗ, ಆರ್ಯವೈಶ್ಯ ಸಂಘ ಟ್ರಸ್ಟ್ ಅಧ್ಯಕ್ಷ ಕೊರಗಲ್ ರಾಘವೇಂದ್ರ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ಕರ್ನಾಟಕ ರೈತ ಸೇನೆಯಿಂದ ತಹಸೀಲ್ದಾರ್‌ಗೆ ಮನವಿ

# ವಿದ್ಯುತ್ ಖಾಸಗೀಕರಣ ಕೈಬಿಡಿ

**■ವಿಜಯಸಾಕ್ಷಿ ಸುದ್ದಿ, ರೋಣ**

ಸರಕಾರಿ ಸ್ವಾಮ್ಯದ ವಿದ್ಯುತ್ ಕಂಪನಿಗಳನ್ನು ಖಾಸಗೀಕರಣಗೊಳಿಸುವ ಪ್ರಕ್ರಿಯೆಯನ್ನು ತಕ್ಷಣ ನಿಲ್ಲಿಸಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರೈತ ಸೇನಾ ತಾಲೂಕು ಘಟಕದ ಉಪಾಧ್ಯಕ್ಷ ಶಿವಲಿಂಗಪ್ಪ ಬೋಪಳಾಪೂರ ಎಚ್ಚರಿಕೆ ನೀಡಿದರು.



ಮಂಗಳವಾರ ತಹಸೀಲ್ದಾರ್ ನಾಗರಾಜ ಕೆ. ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ವಿದ್ಯುತ್ ಖಾಸಗೀಕರಣದಿಂದ ರೈತರು, ಮಧ್ಯಮ ವರ್ಗ ಹಾಗೂ ಬಡ ಜನರಿಗೆ ತೀವ್ರ ತೊಂದರೆ ಉಂಟಾಗಲಿದೆ. ಖಾಸಗಿ ಕಂಪನಿಗಳ ಕೈಗೆ ವಿದ್ಯುತ್ ಸೇವೆ ಹೋದರೆ ದರ ನಿಗದಿ ಮಾಡುವ ಅಧಿಕಾರ ಖಾಸಗಿ ಮಾಲೀಕರಿಗೆ ಸಿಗಲಿದ್ದು, ಇದರಿಂದ ಬಡವರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಬೆಳೆ ವಿಮೆ ವಿಷಯ ಪ್ರಸ್ತಾಪಿಸಿದ ಅವರು, ರೈತರು ಪ್ರತಿ ವರ್ಷ ಸಾವಿರಾರು ರೂಪಾಯಿ ಪ್ರೀಮಿಯಂ ಪಾವತಿಸುತ್ತಿದ್ದರೂ ಸಮರ್ಪಕ ಪರಿಹಾರ ದೊರೆಯುತ್ತಿಲ್ಲ. ಹಲವು ವರ್ಷಗಳಿಂದ ವಿಮೆ ಕಟ್ಟಿದ ರೈತರಿಗೆ ಯಾವುದೇ ಪ್ರಯೋಜನವಾಗದಿರುವ ಬಗ್ಗೆ ಅಸಮಾಧಾನ ವ್ಯಕ್ತವಾಗುತ್ತಿದೆ. ಬೆಳೆ ವಿಮಾ ಯೋಜನೆಗಳ ಬಗ್ಗೆ ಅಧಿಕಾರಿಗಳು ರೈತರಿಗೆ ಸಮಗ್ರ ಮಾಹಿತಿ ನೀಡಬೇಕು ಹಾಗೂ ವಿಮಾ ಕಂಪನಿಗಳ ಕಾರ್ಯವೈಖರಿಯ ಕುರಿತು ಜಾಗೃತಿ ಮೂಡಿಸಬೇಕು ಎಂದು ಒತ್ತಾಯಿಸಿದರು.

ಮನವಿಯನ್ನು ಸ್ವೀಕರಿಸಿದ ತಹಸೀಲ್ದಾರ್ ನಾಗರಾಜ ಕೆ. ಅವರು ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಸಂತ ಮಾರನಬಸರಿ, ಶರಣಪ್ಪ ಹೊಸಳ್ಳಿ, ಯಲ್ಲಪ್ಪ ಚಲವಾದಿ, ಮಲ್ಲಯ್ಯ ಪೂಜಾರ, ಹನಮಂತ ಹಳ್ಳಳ್ಳಿ, ಮುದಿಯಪ್ಪ ತಳವಾರ, ಯಲ್ಲಪ್ಪ ಚಳಗೇರಿ, ಶೇಖಸಾಬ ಪಿಂಜಾರ್, ಕಾಶಯ್ಯ ಪಾಟೀಲ, ಶರಣಪ್ಪ ತಹಶೀಲ್ದಾರ್, ಪ್ರಭು ಮಾರನಬಸರಿ ಸೇರಿದಂತೆ ರೈತ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

### ಎಲೆ ಸಿಂಪರಣೆ, ಹೊದಿಕೆ ಪದ್ಧತಿ ಅಳವಡಿಸಿಕೊಳ್ಳಲು ಸೂಚನೆ; ಕೃಷಿಗೆ ಅನುಕೂಲಕರ ಬೈಕ್ ಮಾದರಿ ಪ್ರದರ್ಶನ

# ಮಳೆ ಕೈಕೊಟ್ಟರೂ ಬೆಳೆ ಉಳಿಸಬಹುದು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮುಂಗಾರು ಮಳೆ ಕೊರತೆಯಿಂದ ಬೆಳೆಗಳ ಬೆಳವಣಿಗೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ರೈತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಬೆಳೆಗಳನ್ನು ಸಂರಕ್ಷಿಸಬೇಕು ಎಂದು ರೈತ ಸಂಪರ್ಕ ಕೇಂದ್ರದ ಅಧಿಕಾರಿ ಬಸವರಾಜ ಗದಗಿನ ಸಲಹೆ ನೀಡಿದ್ದಾರೆ.



ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಬೆಳೆಗಳ ಮೇಲಿನ ಒತ್ತಡ ಕಡಿಮೆ ಮಾಡಲು ನೀರಿನಲ್ಲಿ ಕರಗುವ ರಸಗೊಬ್ಬರಗಳನ್ನು ಎಲೆಗಳ ಮೂಲಕ ಸಿಂಪಡಿಸಬೇಕು. 19:19:19 ಗೊಬ್ಬರವನ್ನು ಪ್ರತಿ ಲೀಟರ್ ನೀರಿಗೆ 3 ರಿಂದ 5 ಗ್ರಾಂ ಪ್ರಮಾಣದಲ್ಲಿ ಬೆರೆಸಿ, ಪ್ರತಿ ಎಕರೆಗೆ 180 ರಿಂದ 200 ಲೀಟರ್ ದ್ರಾವಣವನ್ನು ಸಿಂಪಡಿಸಬಹುದು ಎಂದು ತಿಳಿಸಿದರು.

ಪರ್ಯಾಯವಾಗಿ ಪೊಟ್ಯಾಶಿಯಂ ನೈಟ್ರೇಟ್ (13:0:45) ಅನ್ನು ಪ್ರತಿ ಲೀಟರ್ ನೀರಿಗೆ 5 ರಿಂದ 10 ಗ್ರಾಂ ಪ್ರಮಾಣದಲ್ಲಿ ಬೆರೆಸಿ ಸಿಂಪಡಿಸುವುದರಿಂದ ಬೆಳೆಗಳ ಬೆಳವಣಿಗೆಗೆ ನೆರವಾಗುತ್ತದೆ ಎಂದು ಹೇಳಿದರು.

ಮಣ್ಣಿನಲ್ಲಿರುವ ತೇವಾಂಶ ಉಳಿಸಿಕೊಳ್ಳಲು ಹೊಲಗಳಲ್ಲಿ ಹೊದಿಕೆ ಪದ್ಧತಿ ಅಳವಡಿಸಿಕೊಳ್ಳಬೇಕು. ಕಳೆ ನಿಯಂತ್ರಣ ಮಾಡಿ, ಒಣಗಿದ ಬೆಳೆ ಅವಶೇಷಗಳನ್ನು ಹೊದಿಕೆಯಾಗಿ ಬಳಸುವುದರಿಂದ ಮಣ್ಣಿನ ತೇವಾಂಶ ಸಂರಕ್ಷಣೆ ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ತೆಳುವಾಗಿ ಯಡೆಕುಂಟೆ ಹೊಡೆಯುವುದರಿಂದ ಜಮೀನಿನಲ್ಲಿ ಉಂಟಾಗಿರುವ ಬಿರುಕುಗಳು ಮುಚ್ಚಿಕೊಳ್ಳುತ್ತವೆ. ಇದರಿಂದ ಮಳೆಯ ಕೊರತೆಯ ನಡುವೆಯೂ ಬೆಳೆಗಳ ಬೆಳವಣಿಗೆಗೆ ಅನುಕೂಲವಾಗಲಿದೆ ಎಂದು ವಿವರಿಸಿದರು.

ನರೇಗಲ್ಲ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕೃಷಿ ಇಲಾಖೆಯ ಸಿಬ್ಬಂದಿ ನಡೆಸಿದ ಸಮೀಕ್ಷೆಯ ಆಧಾರದ ಮೇಲೆ ರೈತರಿಗೆ ಈ ಸಲಹೆಗಳನ್ನು ನೀಡಲಾಗುತ್ತಿದೆ ಎಂದು ಹೇಳಿದರು.

#### ಕೃಷಿಗೆ ನೆರವಾಗುವ ವಿಶೇಷ ಬೈಕ್

ಈ ಸಂದರ್ಭದಲ್ಲಿ ಇಳಕಲ್ ತಾಲೂಕಿನ ಸೂಳಿಬಾವಿ ಗ್ರಾಮದ ರೈತ ಬಸವರಾಜ ಉಳ್ಳಾಗಡ್ಡಿ ಅವರು ತಮ್ಮ ಬೈಕ್‌ನ್ನು ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಪರಿವರ್ತಿಸಿರುವುದನ್ನು ಪ್ರದರ್ಶಿಸಿದರು. ಅಂತರ ಬೇಸಾಯ, ಔಷಧಿ ಸಿಂಪರಣೆ ಹಾಗೂ ಹರಗುವ ಕಾರ್ಯಗಳಿಗೆ ಬಳಸಬಹುದಾದ ಈ ವಾಹನವನ್ನು ಸುಮಾರು ಒಂದು ಲಕ್ಷ ರೂಪಾಯಿ ವೆಚ್ಚದಲ್ಲಿ ಸಿದ್ಧಪಡಿಸಲಾಗಿದೆ.

ಒಂದು ಎಕರೆ ಕೃಷಿ ಕಾರ್ಯಕ್ಕೆ ಕೇವಲ ಒಂದು ಲೀಟರ್ ಪೆಟ್ರೋಲ್ ಸಾಕಾಗುತ್ತಿದ್ದು, 200 ಲೀಟರ್ ಸಿಂಪಡಣೆ ದ್ರಾವಣವನ್ನು ಸಾಗಿಸುವ ಸಾಮರ್ಥ್ಯ ಹೊಂದಿದೆ ಎಂದು ಅವರು ಮಾಹಿತಿ ನೀಡಿದರು.

#### ಗಾಂಜಾ ಬೆಳೆ ಬೆಳೆದರೆ ಕಾನೂನು ಕ್ರಮ

ಕೆಲವು ರೈತರು ಹೊಲಗಳಲ್ಲಿ ಗಾಂಜಾ ಬೆಳೆ ಬೆಳೆಯುತ್ತಿರುವ ಕುರಿತು ಮಾಹಿತಿ ಲಭ್ಯವಾಗುತ್ತಿದೆ. ಗಾಂಜಾ ಬೆಳೆಯುವುದು ಕಾನೂನುಬಾಹಿರವಾಗಿದ್ದು, ನರೇಗಲ್ಲ ಹೋಬಳಿ ವ್ಯಾಪ್ತಿಯಲ್ಲಿ ಅಂತಹ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದರೆ ಸಂಬಂಧಿಸಿದ ರೈತರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಬಸವರಾಜ ಗದಗಿನ ಎಚ್ಚರಿಕೆ ನೀಡಿದರು.

### ಕನ್ನಡದ ಕೀರ್ತಿ ಪಸರಿಸಿದ ಮಹಿಳಾ ಸಾಧಕಿಯರು–ಸರಸ್ವತಿ ಹುಲ್ಲಣ್ಣವರ

# ಮಹಿಳೆಯರ ಸಾಧನೆ ಸಮಾಜಕ್ಕೆ ದಾರಿದೀಪ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕನ್ನಡ ನಾಡು ಕಲೆ, ಸಾಹಿತ್ಯ, ಶಿಕ್ಷಣ, ವಿಜ್ಞಾನ, ಸಮಾಜಸೇವೆ, ಆಡಳಿತ, ರಾಜಕೀಯ ಹಾಗೂ ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಪೂರ್ವ ಸಾಧನೆ ಮಾಡಿದ ಮಹಿಳೆಯರನ್ನು ಕಂಡಿದ್ದು, ಅವರ ಪ್ರತಿಭೆ, ಪರಿಶ್ರಮ ಮತ್ತು ಸಮಾಜಮುಖಿ ಚಿಂತನೆ ಕನ್ನಡದ ಕೀರ್ತಿಯನ್ನು ದೇಶ–ವಿದೇಶಗಳಿಗೆ ಪಸರಿಸಿದೆ ಎಂದು ಶ್ರೀ ಜಗದ್ಗುರು ವೀರಗಂಗಾಧರ ಮಹಿಳಾ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯೆ ಸರಸ್ವತಿ ಹುಲ್ಲಣ್ಣವರ ಹೇಳಿದರು.

ಪಟ್ಟಣದ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಆಯೋಜಿಸಿದ್ದ "ಕನ್ನಡ ನಾಡಿನ ಅನನ್ಯ ಸಾಧಕೀಯರು" ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದ ಅವರು, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಕನ್ನಡ ನಾಡಿನ ಮಹಿಳೆಯರ ಕೊಡುಗೆಯನ್ನು ಸ್ಮರಿಸಿದರು.



ಸಾಫ್ಟ್‌ವೇರ್ ಇಂಜಿನಿಯರಿಂಗ್ ಕ್ಷೇತ್ರದಿಂದ ಕೃಷಿ ಉದ್ಯಮಿಯಾಗಿ ಹೊರಹೊಮ್ಮಿ ಬಂಜರು ಭೂಮಿಯನ್ನು ಹನಿ ನೀರಾವರಿ ಹಾಗೂ ಸಾವಯವ ಕೃಷಿಯ ಮೂಲಕ ಸಮೃದ್ಧ ತೋಟವನ್ನಾಗಿ ರೂಪಿಸಿದ ಕವಿತಾ ಮಿಶ್ರಾ, ಆಡಳಿತ ಕ್ಷೇತ್ರದ ಡಿ. ರೂಪಾ, ಸಾಹಿತ್ಯ ಕ್ಷೇತ್ರದ ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್, ಸಮಾಜಸೇವೆ ಮತ್ತು ಸಾಹಿತ್ಯ ಕ್ಷೇತ್ರದ ಸುಧಾ ಮೂರ್ತಿ, ಪರಿಸರ ಸಂರಕ್ಷಣೆಯ ಸಾಲುಮರದ ತಿಮ್ಮಕ್ಕ ಹಾಗೂ ತುಳಸಿ ಗೌಡ ಸೇರಿದಂತೆ ಅನೇಕ ಮಹಿಳೆಯರ ಸಾಧನೆಗಳನ್ನು ಅವರು ವಿವರಿಸಿದರು.

> "ಮಹಿಳೆಯರ ಸಾಧನೆಯ ಹಿಂದೆ ಆತ್ಮವಿಶ್ವಾಸ, ಪರಿಶ್ರಮ ಮತ್ತು ಸಮಾಜದ ಬಗ್ಗೆ ಕಾಳಜಿ ಅಡಗಿರುತ್ತದೆ, ಅವರ ಯಶಸ್ಸು ಇಡೀ ಸಮಾಜಕ್ಕೆ ಪ್ರೇರಣೆ."
>
> – **ಸರಸ್ವತಿ ಹುಲ್ಲಣ್ಣವರ**


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಮುಖ್ಯೋಪಾಧ್ಯಾಯಿನಿ ಶಕುಂತಲಾ ಅಳಗವಾಡಿ ಮಾತನಾಡಿ, ರಾಜಕೀಯ, ಶಿಕ್ಷಣ, ವೈದ್ಯಕೀಯ, ವಿಜ್ಞಾನ, ಸಂಗೀತ, ನೃತ್ಯ, ಕ್ರೀಡೆ ಹಾಗೂ ರಂಗಭೂಮಿ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಕನ್ನಡ ನಾಡಿನ ಮಹಿಳೆಯರು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕಾಂಚನಮಾಲಾ ಹಸರೆಡ್ಡಿ, ಅರುಂಧತಿ ಬಿಂಕದಕಟ್ಟಿ ಹಾಗೂ ನಿವೃತ್ತ ಶಿಕ್ಷಕಿ ಸುವರ್ಣ ಹಿರೇಮಠ ಭಾಗವಹಿಸಿ ಕನ್ನಡ ಮಹಿಳೆಯರ ಸಾಧನೆಯನ್ನು ಸ್ಮರಿಸಿದರು.

ವೇದಿಕೆಯ ಅಧ್ಯಕ್ಷೆ ಲಲಿತಾ ಕೆರಿಮನಿ, ಕಾರ್ಯದರ್ಶಿ ನಿರ್ಮಲಾ ಅರಳಿ, ದೇವಕ್ಕ ಪಾಟೀಲ, ರತ್ನಾ ಕರ್ಕಿ, ನೀಲಕ್ಕ ಬೂದಿಹಾಳ, ಸಾವಿತ್ರಿಬಾಯಿ ಗುಡಗೇರಿ, ಮಹಾನಂದ ಕೊಣ್ಣೂರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಗಾಯತ್ರಿ ಅಂಗಡಿ, ಪಾರ್ವತಿ ಕಳ್ಳಿಮಠ, ನಂದಿನಿ ಮಾಳವಾಡ, ಚಿತ್ರಾ ಯಾಳಗಿ ಹಾಗೂ ನಾಗರತ್ನ ಬುರುಡಿ ಕಾರ್ಯಕ್ರಮ ನಿರ್ವಹಿಸಿದರು.

### ಸೌಹಾರ್ದದ ಸಂಕೇತವಾಗಿ ಡೋಲಿ ಸಮರ್ಪಣೆ; ಹಿಂದೂ–ಮುಸ್ಲಿಂ ಬಾಂಧವರಿಂದ ಜಂಟಿ ಸಂಭ್ರಮ

# ಮೊಹರಂ ಡೋಲಿಗೆ ಹಿಂದೂಗಳ ದೇಣಿಗೆ



> "ಎಲ್ಲ ಧರ್ಮಗಳ ತಿರುಳು ಒಂದೇ. ಶಾಂತಿ, ಸಹಬಾಳ್ವೆ ಮತ್ತು ಮಾನವೀಯತೆಯೇ ಎಲ್ಲ ಧರ್ಮಗಳ ಸಂದೇಶ. ಕೋಚಲಾಪುರದ ಭಾವೈಕ್ಯತೆ ಇಡೀ ಸಮಾಜಕ್ಕೆ ಮಾದರಿ."
>
> – ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ನರೇಗಲ್ಲ ಹಿರೇಮಠ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಿಂದೂ–ಮುಸ್ಲಿಂ ಸೌಹಾರ್ದ ಮತ್ತು ಭಾವೈಕ್ಯದ ಅಪರೂಪದ ಮಾದರಿಯೊಂದು ನರೇಗಲ್ಲ ಸಮೀಪದ ಕೋಚಲಾಪುರ ಗ್ರಾಮದಲ್ಲಿ ಮೊಹರಂ ಹಬ್ಬದ ಸಂದರ್ಭದಲ್ಲಿ ಮೂಡಿ ಬಂದಿದ್ದು, ಗ್ರಾಮದ ಜನರು ಸಮಾಜಕ್ಕೆ ಸೌಹಾರ್ದತೆಯ ಸಂದೇಶ ರವಾನಿಸಿದ್ದಾರೆ.

ಕೋಚಲಾಪುರ ಪುಟ್ಟ ಗ್ರಾಮವಾದರೂ ಹಿಂದೂ ಹಾಗೂ ಮುಸ್ಲಿಂ ಸಮುದಾಯದವರು ಪರಸ್ಪರರ ಹಬ್ಬಗಳಲ್ಲಿ ಭಾಗವಹಿಸಿ ಅಣ್ಣ–ತಮ್ಮಂದಿರಂತೆ ಬೆರೆಯುವ ಸಂಪ್ರದಾಯವನ್ನು ಹಲವು ವರ್ಷಗಳಿಂದ ಉಳಿಸಿಕೊಂಡು ಬಂದಿದ್ದಾರೆ. ಈ ಬಾರಿ ಮೊಹರಂ ಹಬ್ಬದ ಮೆರವಣಿಗೆಗಾಗಿ ಅಗತ್ಯವಿದ್ದ ಡೋಲಿ ನಿರ್ಮಾಣಕ್ಕೆ ಗ್ರಾಮದ ಪ್ರಕಾಶ ಬಳಗೋಡಮಠ ಅವರು ಉದಾರ ದೇಣಿಗೆ ನೀಡಿ ಸಹಕರಿಸಿದ್ದು, ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಗ್ರಾಮಕ್ಕೆ ಆಗಮಿಸಿದ ನೂತನ ಡೋಲಿಯನ್ನು ಹಿಂದೂ ಬಾಂಧವರು ಭಜನೆಗಳೊಂದಿಗೆ ಗ್ರಾಮದಲ್ಲಿ ಮೆರವಣಿಗೆ ನಡೆಸಿ ಸೌಹಾರ್ದತೆಯ ಅನನ್ಯ ಸಂದೇಶ ಸಾರಿದರು. ಈ ದೃಶ್ಯ ಗ್ರಾಮದಲ್ಲಿ ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿತು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಎಲ್ಲ ಧರ್ಮಗಳ ಮೂಲ ತತ್ವ ಮಾನವೀಯತೆ ಮತ್ತು ಶಾಂತಿಯೇ ಆಗಿದೆ. ಕೋಚಲಾಪುರ ಗ್ರಾಮದಲ್ಲಿ ಕಾಣುತ್ತಿರುವ ಭಾವೈಕ್ಯತೆ ಇತರರಿಗೆ ಮಾದರಿಯಾಗಿದ್ದು, ಈ ಸೌಹಾರ್ದತೆ ಎಂದೆಂದಿಗೂ ಉಳಿಯಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ದಾನಿ ಪ್ರಕಾಶ ಬಳಗೋಡಮಠ ಹಾಗೂ ಡೋಲಿ ನಿರ್ಮಿಸಿದ ಶಾಶ್ವತಾಚಾರಿ ಕಮ್ಮಾರ ಅವರನ್ನು ನರೇಗಲ್ಲ ದರ್ಗಾದ ಅಜ್ಜನವರಾದ ಹಜರತ್ ಮಂಜೂರ ಹುಸೇನಶಾವಲಿ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಡಾ. ಆರ್.ಕೆ. ಗಚ್ಚಿನಮಠ, ಅಂದಾನಯ್ಯ ಮಾಲಗಿತ್ತಿಮಠ, ಜಿನ್ನಾಸಾಬ ಚಾಕ್ರೆ, ಸಂಗಯ್ಯ ಮಾಲಗಿತ್ತಿಮಠ ಸೇರಿದಂತೆ ಹಿಂದೂ–ಮುಸ್ಲಿಂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಅಬ್ಬಾಸಲಿ ರವಡೂರ ಕಾರ್ಯಕ್ರಮ ನಿರೂಪಿಸಿದರೆ, ಪೀರಸಾಬ ಗಡಾದ ಸ್ವಾಗತಿಸಿದರು.

**ಅರ್ಹ ಮತದಾರರು ಯಾರೂ ವಂಚಿತರಾಗದಂತೆ ಎಸ್‌ಐಆರ್ ಕಾರ್ಯ ನಡೆಸಿ; ಬಿಎಲ್‌ಒಗಳಿಗೆ ನಂದಾ ಹಣಬರಮಟ್ಟಿ ಕಟ್ಟುನಿಟ್ಟಿನ ಸೂಚನೆ**

# ಮತದಾರರ ಪಟ್ಟಿ ಪರಿಷ್ಕರಣೆಗೆ ಪಾರದರ್ಶಕತೆ ಮಂತ್ರ..!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಅತ್ಯಂತ ಜವಾಬ್ದಾರಿಯುತವಾಗಿ, ನಿಖರವಾಗಿ ಹಾಗೂ ಸಂಪೂರ್ಣ ಪಾರದರ್ಶಕವಾಗಿ ನಡೆಸಬೇಕು ಎಂದು ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕಿ ಹಾಗೂ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ನಂದಾ ಹಣಬರಮಟ್ಟಿ ಸೂಚನೆ ನೀಡಿದರು. ಪಟ್ಟಣದ ಚನ್ನಮ್ಮನವರ ಕಲ್ಯಾಣ ಮಂಟಪದಲ್ಲಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ 102 ಮತಗಟ್ಟೆಗಳ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಮೇಲ್ವಿಚಾರಕರು ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರ (ಬಿಎಲ್‌ಎ) ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಯಾವುದೇ ಲೋಪಕ್ಕೆ ಅವಕಾಶ ನೀಡಬಾರದು. ಪ್ರತಿಯೊಬ್ಬ ಅರ್ಹ ಮತದಾರರ ಹೆಸರೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಅಧಿಕಾರಿಗಳು ಮನೆ-ಮನೆಗೆ ಭೇಟಿ ನೀಡಿ ನಿಖರ ಮಾಹಿತಿ ಸಂಗ್ರಹಿಸಬೇಕು ಎಂದು ಸೂಚಿಸಿದರು.

ತಹಸೀಲ್ದಾರ್ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿ ಧನಂಜಯ ಎಂ. ಮಾತನಾಡಿ, ವಿಶೇಷ ತೀವ್ರ ಪರಿಷ್ಕರಣೆ ಅಭಿಯಾನದ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು ಮನೆ-ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿಯನ್ನು ಪರಿಶೀಲಿಸಲಿದ್ದು, ಅಭಿಯಾನದ ಯಶಸ್ಸಿಗೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು. ಎಸ್‌ಐಆರ್ ಕುರಿತು ತರಬೇತುದಾರರಾದ ನವೀನ್ ಅಂಗಡಿ ಹಾಗೂ ಎಂ.ಎಸ್. ಮಳ್ಳಿಮಠ ಅವರು ಬಿಎಲ್‌ಒಗಳು ಮತ್ತು ಬಿಎಲ್‌ಎಗಳಿಗೆ ಮತದಾರರ ಪಟ್ಟಿ ಪರಿಷ್ಕರಣೆ, ದಾಖಲೆ ಪರಿಶೀಲನೆ ಹಾಗೂ ಚುನಾವಣಾ ಆಯೋಗದ ಮಾರ್ಗಸೂಚಿಗಳ ಕುರಿತು ತರಬೇತಿ ನೀಡಿದರು. ಕಾರ್ಯಕ್ರಮದಲ್ಲಿ ಕಂದಾಯ ನಿರೀಕ್ಷಕ ಎಂ.ಎ. ನದಾಫ, ಶಿರಸ್ತೇದಾರ ಜಿ.ಎ. ಮನಿಯಾರ, ಪ್ರವೀಣ ಬಾಳಿಕಾಯಿ, ಗಂಗಾಧರ ಮೆಣಸಿನಕಾಯಿ, ಜಗದೀಶಗೌಡ ಪಾಟೀಲ, ವಿಜಯ ಕುಂಬಾರ, ಗ್ರಾಮ ಆಡಳಿತಾಧಿಕಾರಿಗಳು, ತಹಸೀಲ್ದಾರ್ ಕಚೇರಿ ಸಿಬ್ಬಂದಿ, ಬಿಎಲ್‌ಒಗಳು ಹಾಗೂ ಬಿಎಲ್‌ಎಗಳು ಉಪಸ್ಥಿತರಿದ್ದರು.

> "ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಪ್ರತಿಯೊಬ್ಬ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಬೇಕು. ವಿಶೇಷ ತೀವ್ರ ಪರಿಷ್ಕರಣೆ ಕಾರ್ಯದಲ್ಲಿ ಯಾವುದೇ ಲೋಪಕ್ಕೆ ಅವಕಾಶ ನೀಡಬಾರದು."
> – **ನಂದಾ ಹಣಬರಮಟ್ಟಿ,**
> ಮತದಾರರ ನೋಂದಣಾಧಿಕಾರಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರ

# ಜು.10ರವರೆಗೆ ಸಾರಿಗೆ ದಂಡಕ್ಕೆ ಶೇ.50 ರಿಯಾಯಿತಿ

■ವಿಜಯಸಾಕ್ಷಿ ಸುದ್ದಿ, ಗದಗ


ಸಾರಿಗೆ ಇಲಾಖೆಯಲ್ಲಿ 1991ರ ಎಪ್ರಿಲ್ 1ರಿಂದ 2022ರ ಮಾರ್ಚ್ 31ರವರೆಗೆ ದಾಖಲಾಗಿದ್ದು, ಪಾವತಿಗೆ ಬಾಕಿ ಇರುವ ಡಿ.ಎಸ್.ಎ. ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಲಾಗಿದೆ.

ಈ ವಿಶೇಷ ರಿಯಾಯಿತಿ ಜೂನ್ 21ರಿಂದ ಜುಲೈ 10, 2026ರವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಬಾಕಿ ದಂಡ ಹೊಂದಿರುವ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಶೇ.50 ರಿಯಾಯಿತಿಯೊಂದಿಗೆ ದಂಡ ಪಾವತಿಸುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

**ಪಿಎಂ ಸೂರ್ಯ ಘರ್ ಯೋಜನೆ, ಸೌರ ದರ ವಿಚಾರದಲ್ಲಿ ಮೋದಿ ಸರ್ಕಾರದ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ**

# ಸೌರ ಯೋಜನೆ ಹೆಸರಲ್ಲಿ ಕಾರ್ಪೊರೇಟ್ ಪರ ಬಿಜೆಪಿ

■ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರದ ಬಿಜೆಪಿ ಸರ್ಕಾರ ಜಾರಿಗೆ ತಂದಿರುವ 'ಪಿಎಂ ಸೂರ್ಯ ಘರ್' ಯೋಜನೆ ಹಾಗೂ ಸೌರಶಕ್ತಿ ನೀತಿಯು ಕಾರ್ಪೊರೇಟ್ ಪರವಾಗಿದ್ದು, ಬಡ ಮತ್ತು ಮಧ್ಯಮ ವರ್ಗದ ಜನರ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸೌರಶಕ್ತಿ ಯೋಜನೆಯ ಸಂಪೂರ್ಣ ಶ್ರೇಯಸ್ಸನ್ನು ಪಡೆದುಕೊಳ್ಳಲು ಬಿಜೆಪಿ ಪ್ರಯತ್ನಿಸುತ್ತಿದ್ದು, ಮೂಲಸೌಕರ್ಯ ಅಭಿವೃದ್ಧಿಯ ಭಾರವನ್ನು ರಾಜ್ಯಗಳ ಮೇಲೆ ಹೊರಿಸಿ ಜನರಿಗೆ ಅನ್ಯಾಯ ಮಾಡಿದೆ ಎಂದು ದೂರಿದರು.

ಸೌರಶಕ್ತಿ ಸ್ಥಾವರಗಳ ವೆಚ್ಚ ಕಡಿಮೆಯಾಗಿದ್ದರೂ ಮತ್ತು ಜಿಎಸ್‌ಟಿ ಇಳಿಕೆಯಾಗಿದ್ದರೂ, ಗ್ರಾಹಕರ ಮೇಲೆ ಇನ್ನೂ ತೆರಿಗೆ ಹಾಗೂ ಹೆಚ್ಚಿನ ಬಡ್ಡಿದರದ ಸಾಲದ ಹೊರೆ ಮುಂದುವರಿದಿರುವ ಬಗ್ಗೆ ಬಿಜೆಪಿ ಉತ್ತರಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಈಗಾಗಲೇ ಸಾವಿರಾರು ಮೆಗಾವ್ಯಾಟ್ ಸೌರಶಕ್ತಿ ಉತ್ಪಾದನೆಗೆ ಉತ್ತೇಜನ ನೀಡಿದ್ದು, ಸಾವಿರಾರು ಮನೆಗಳಿಗೆ ಸೌರಶಕ್ತಿ ಸೌಲಭ್ಯ ಕಲ್ಪಿಸಿದೆ. ಸೌರಶಕ್ತಿ ಮರುಖರೀದಿ ದರವನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ) ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ನಿಗದಿಪಡಿಸುತ್ತಿದ್ದು, ಇದನ್ನು ರಾಜಕೀಯವಾಗಿ ಬಿಜೆಪಿ ಟೀಕಿಸುತ್ತಿದೆ ಎಂದು ಹೇಳಿದರು.

ಬಿಜೆಪಿ ಆಡಳಿತದಲ್ಲಿ ಸೌರಶಕ್ತಿ ಕ್ಷೇತ್ರದಲ್ಲಿ ಕೆಲವೇ ಶ್ರೀಮಂತರಿಗೆ ಹೆಚ್ಚಿನ ಲಾಭವಾಗುವ ರೀತಿಯ ನೀತಿಗಳನ್ನು ಜಾರಿಗೆ ತರಲಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಸಬ್ಸಿಡಿ ಮತ್ತು ವೆಚ್ಚ ಕಡಿತದ ಮೂಲಕ ಸಾಮಾನ್ಯ ಗ್ರಾಹಕರಿಗೆ ಅನುಕೂಲ ಕಲ್ಪಿಸುವ ಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ರಾಜ್ಯದ ವಿದ್ಯುತ್ ಗ್ರಿಡ್ ಮತ್ತು ಸಾರ್ವಜನಿಕ ಹಣಕಾಸು ವ್ಯವಸ್ಥೆಯನ್ನು ರಕ್ಷಿಸುವ ಉದ್ದೇಶದಿಂದ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಬಿಜೆಪಿ ರಾಜಕೀಯ ಕಾರಣಕ್ಕಾಗಿ ಟೀಕಿಸುತ್ತಿದೆ ಎಂದು ಅಶೋಕ ಮಂದಾಲಿ ಆರೋಪಿಸಿದರು.

> "ಪಿಎಂ ಸೂರ್ಯ ಘರ್ ಯೋಜನೆಯ ಸಂಪೂರ್ಣ ಶ್ರೇಯಸ್ಸು ಪಡೆಯಲು ಬಿಜೆಪಿ ಯತ್ನಿಸುತ್ತಿದ್ದು, ವಾಸ್ತವವನ್ನು ಜನರ ಮುಂದೆ ಕಾಂಗ್ರೆಸ್ ಬಿಚ್ಚಿಡಲಿದೆ."
> – **ಅಶೋಕ ಮಂದಾಲಿ,**
> ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ

**ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿಗೆ ಸಂಘಟನೆ ಅಗತ್ಯ: ಸುವರ್ಣ ಸಿ. ಹಿರೇಮಠ**

# ಸಂಘಟಿತರಾದರೆ ಹಿರಿಯರಿಗೆ ಹೆಚ್ಚಿನ ಸೌಲಭ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಹಿರಿಯ ನಾಗರಿಕರು ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳನ್ನು ಸಮರ್ಪಕವಾಗಿ ಪಡೆಯಬೇಕಾದರೆ ಸಂಘಟಿತರಾಗುವುದು ಅತ್ಯಂತ ಅಗತ್ಯ ಎಂದು ನಿವೃತ್ತ ಶಿಕ್ಷಕಿ ಸುವರ್ಣ ಸಿ. ಹಿರೇಮಠ ಹೇಳಿದರು.

ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಮಿಲ್ ಆವರಣದಲ್ಲಿ ನಡೆದ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಅವರು ಮಾತನಾಡಿದರು.

ಹಿರಿಯ ನಾಗರಿಕರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಸಂಘದ ಪಾತ್ರ ಮಹತ್ವದ್ದಾಗಿದೆ. ಯುವ ಪೀಳಿಗೆಗೆ ಹಿರಿಯರ ಅನುಭವ ಮತ್ತು ಮಾರ್ಗದರ್ಶನ ಅಗತ್ಯವಾಗಿದ್ದು, ಮಕ್ಕಳು ಹಿರಿಯರನ್ನು ಗೌರವದಿಂದ ಕಾಣಬೇಕು ಎಂದು ಹೇಳಿದರು.

ಹಿರಿಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದರೊಂದಿಗೆ ವೃದ್ಧಾಪ್ಯದಲ್ಲಿಯೂ ಸಮಾಜ ಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಸರ್ಕಾರವೂ ಹಿರಿಯ ನಾಗರಿಕರಿಗೆ ಹೆಚ್ಚಿನ ಸೌಲಭ್ಯ ಮತ್ತು ಪ್ರೋತ್ಸಾಹ ನೀಡಬೇಕು ಎಂದು ಒತ್ತಾಯಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಿ.ಆರ್. ಲಕ್ಕುಂಡಿಮಠ ಹಾಗೂ ಗೌರವಾಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ಹಿರಿಯ ನಾಗರಿಕರ ಸಭೆ ಹಾಗೂ ಚಟುವಟಿಕೆಗಳಿಗೆ ಸೂಕ್ತ ಸ್ಥಳದ ಅವಶ್ಯಕತೆ ಇದ್ದು, ಈ ಬಗ್ಗೆ ಪುರಸಭೆ ಹಾಗೂ ಜನಪ್ರತಿನಿಧಿಗಳು ಗಮನಹರಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ನಾಗರಿಕರ ಗುರುತಿನ ಚೀಟಿಯ ಮೂಲಕ ಆರೋಗ್ಯ ಸೇವೆ, ಪ್ರಯಾಣ ದರ ರಿಯಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳ ಸೌಲಭ್ಯಗಳನ್ನು ಪಡೆಯಬಹುದಾಗಿದ್ದು, ಹಿರಿಯರು ಅವುಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರು ಹಾಗೂ ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು.

ಸಭೆಯಲ್ಲಿ ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಕೋಲಕಾರ, ಶಕುಂತಲಾ ಅಳಗವಾಡಿ, ಎಲ್.ಆರ್. ಮಲ್ಲಸಮುದ್ರ, ಚಂದ್ರಶೇಖರ ಸೌದತ್ತಿ, ನಂದಿಕೋಲಮಠ, ನಿಂಗಪ್ಪ ಗೊರವರ, ನೀಲಪ್ಪ ಕರ್ಜಕಣ್ಣವರ, ಸೂಗಿರಪ್ಪ ವಾಲಿಶೆಟ್ಟರ, ನಾಗರಾಜ ಸೂರಣಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ನಾಗಭೂಷಣ ಪವಾಡಶೆಟ್ಟರ ಹಾಗೂ ಐ.ಎಸ್. ಮಡಿವಾಳರ ಕಾರ್ಯಕ್ರಮ ನಿರೂಪಿಸಿದರು.

**ಟಾಟಾಗೆ ವಿತರಣಾ ಪರವಾನಿಗೆ ಬೇಡ-ಇಲ್ಲದಿದ್ದರೆ ರಾಜ್ಯವ್ಯಾಪಿ ಹೋರಾಟದ ಎಚ್ಚರಿಕೆ**

# ವಿದ್ಯುತ್ ಖಾಸಗೀಕರಣಕ್ಕೆ ರೈತರ ತೀವ್ರ ವಿರೋಧ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ರಾಜ್ಯದಲ್ಲಿ ವಿದ್ಯುತ್ ವಿತರಣೆಯನ್ನು ಖಾಸಗಿ ಕಂಪನಿಗಳಿಗೆ ವಹಿಸಬಾರದು ಹಾಗೂ ಟಾಟಾ ಕಂಪನಿಗೆ ವಿದ್ಯುತ್ ವಿತರಣಾ ಪರವಾನಿಗೆ ನೀಡಬಾರದು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಲಕ್ಷ್ಮೇಶ್ವರ ತಾಲೂಕು ಘಟಕದ ಕಾರ್ಯಕರ್ತರು ಮಂಗಳವಾರ ತಹಸೀಲ್ದಾರ್ ಎಂ. ಧನಂಜಯ ಅವರಿಗೆ ಮನವಿ ಸಲ್ಲಿಸಿದರು.

ವಿದ್ಯುತ್ ವಿತರಣಾ ಕ್ಷೇತ್ರಕ್ಕೆ ಖಾಸಗಿ ಕಂಪನಿಗಳು ಪ್ರವೇಶಿಸಿದರೆ ರೈತರ ಪಂಪ್‌ಸೆಟ್‌ಗಳಿಗೆ ಹಾಗೂ ಗೃಹ ಬಳಕೆದಾರರಿಗೆ ತೊಂದರೆಯಾಗಲಿದೆ. ಜೊತೆಗೆ ನಿರುದ್ಯೋಗ ಸಮಸ್ಯೆಯೂ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ವಿದ್ಯುತ್ ಇಲಾಖೆಯನ್ನು ಖಾಸಗಿಯವರಿಗೆ ವಹಿಸಲು ಯಾವುದೇ ಪರವಾನಿಗೆ ನೀಡಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈಗಾಗಲೇ ಕೆಲವು ರಾಜ್ಯಗಳಲ್ಲಿ ಖಾಸಗಿ ಕಂಪನಿಗಳು ವಿದ್ಯುತ್ ಕ್ಷೇತ್ರಕ್ಕೆ ಪ್ರವೇಶಿಸಿದ ಪರಿಣಾಮ ರೈತರು ಹಾಗೂ ಸಾಮಾನ್ಯ ಗ್ರಾಹಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಹೆಸ್ಕಾಂನ ಆರ್ಥಿಕ ಸ್ಥಿರತೆ, ವಿದ್ಯುತ್ ಕಾರ್ಮಿಕರ ಹಿತಾಸಕ್ತಿ ಹಾಗೂ ಗ್ರಾಮೀಣ ಗ್ರಾಹಕರ, ವಿಶೇಷವಾಗಿ ರೈತರ ಹಿತದೃಷ್ಟಿಯಿಂದ ಖಾಸಗಿ ವಿತರಣಾ ಪರವಾನಗಿ ಅರ್ಜಿಯನ್ನು ತಿರಸ್ಕರಿಸಬೇಕು ಎಂದು ಆಗ್ರಹಿಸಲಾಯಿತು.

ಒಂದು ವೇಳೆ ವಿದ್ಯುತ್ ಖಾಸಗೀಕರಣಕ್ಕೆ ಮುಂದಾದರೆ ರಾಜ್ಯಾದ್ಯಂತ ಬಂದ್ ಹಾಗೂ ಬಾರಕೋಲು ಚಳವಳಿ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ನಾಗರಾಜ ಕಳ್ಳಿಹಾಳ, ಮಂಜುನಾಥ ಅಣ್ಣಿಗೇರಿ ಸೇರಿದಂತೆ ರಾಮಣ್ಣ ಕಾಶಿಕೋವಿ, ಶಿವಾನಂದ ಲಿಂಗಶೆಟ್ಟಿ, ಮಂಜುನಾಥ ಹಾವಳಕೇರಿ, ಮುರುಗೇಶ ಬಳಿಗಾರ, ಶಂಭಣ್ಣ ಬಳಿಗಾರ, ಸಿದ್ಧಲಿಂಗಪ್ಪ ಕಳ್ಳಿಹಾಳ, ಪ್ರಕಾಶ ಬಡಿಗೇರ, ಖಾದರ್‌ಸಾಬ್ ರಿತ್ತಿ, ಶಿವಪ್ಪ ಶಿವಸಿಂಪಿಗೇರ, ದಾಲವ್‌ಸಾಬ ತಬ್ಬಲ, ಫಕ್ಕೀರೇಶ ಶೀರನಹಳ್ಳಿ, ಕುಮಾರ ಕರಡಿಕೊಪ್ಪ ಹಾಗೂ ರಮೇಶ ಕಾಶಿಕೋವಿ ಉಪಸ್ಥಿತರಿದ್ದರು.

**ರೈತ ವಿರೋಧಿ ನೀತಿ ಕೈಬಿಡದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ**

# ಸ್ಮಾರ್ಟ್ ಮೀಟರ್, ಡಿಬಿಟಿಗೆ ಸಿಐಟಿಯು ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ




ನೇರ ನಗದು ವರ್ಗಾವಣೆ (ಡಿಬಿಟಿ) ಹಾಗೂ ಸ್ಮಾರ್ಟ್ ಮೀಟರ್ ಅಳವಡಿಕೆ ಯೋಜನೆಗಳು ರೈತ ವಿರೋಧಿಯಾಗಿದ್ದು, ಸರ್ಕಾರ ಕೂಡಲೇ ಈ ನೀತಿಗಳನ್ನು ಹಿಂಪಡೆಯಬೇಕು ಎಂದು ಸಿಐಟಿಯು ತಾಲೂಕು ಘಟಕ ಆಗ್ರಹಿಸಿದೆ.

ಪಟ್ಟಣದ ಕೆಪಿಟಿಸಿಎಲ್ ಕಚೇರಿ ಎದುರು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಸಿಐಟಿಯು ತಾಲೂಕು ಮುಖ್ಯಸ್ಥ ಜಗನ್ನಾಥ, ವಿದ್ಯುತ್ ಇಲಾಖೆಯನ್ನು ಖಾಸಗೀಕರಣ ಮಾಡುವ ಮೂಲಕ ಸರ್ಕಾರ ರೈತರು ಹಾಗೂ ವಿದ್ಯುತ್ ನೌಕರರಿಗೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿದರು.

ಖಾಸಗಿ ಕಂಪನಿಗಳಲ್ಲಿ ಉದ್ಯೋಗಿಗಳಿಗೆ ಉದ್ಯೋಗ ಭದ್ರತೆ ಹಾಗೂ ಸೌಲಭ್ಯಗಳ ಕೊರತೆ ಇದೆ. ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಿದರೆ ರೈತರ ಹಿತಕ್ಕೂ ಧಕ್ಕೆ ಉಂಟಾಗಲಿದ್ದು, ಮುಂದಿನ ದಿನಗಳಲ್ಲಿ ರೈತರ ಸಂಕಷ್ಟ ಮತ್ತಷ್ಟು ಹೆಚ್ಚಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸರ್ಕಾರ ಜೆಸ್ಕಾಂ, ಹೆಸ್ಕಾಂ, ಮೆಸ್ಕಾಂ ಸೇರಿದಂತೆ ವಿದ್ಯುತ್ ವಿತರಣಾ ಸಂಸ್ಥೆಗಳನ್ನು ಖಾಸಗೀಕರಣ ಮಾಡುವ ಬದಲು ವಿದ್ಯುತ್ ನೌಕರರ ಹಾಗೂ ರಾಜ್ಯದ 40 ಲಕ್ಷಕ್ಕೂ ಹೆಚ್ಚು ಪಂಪ್‌ಸೆಟ್ ಹೊಂದಿರುವ ರೈತರ ಹಿತವನ್ನು ಕಾಪಾಡಬೇಕು. ಇಲ್ಲದಿದ್ದರೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು.


ಬಳಿಕ ಪ್ರತಿಭಟನಾಕಾರರು ತಮ್ಮ ಬೇಡಿಕೆಗಳ ಮನವಿಯನ್ನು ಕೆಪಿಟಿಸಿಎಲ್ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ನಾಗರಾಜ್ ಅವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಿಪಿಐ ಮುಖಂಡ ಆರ್.ಎಸ್. ಬಸವರಾಜ್, ಕೆಇಬಿ ನೌಕರರು ಹಾಗೂ ಸಿಐಟಿಯು ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಹಿಂದೂ-ಮುಸ್ಲಿಮರ ಸೌಹಾರ್ದದ ಸಂಕೇತವಾಗಿ ಅಲಾಯಿ ದೇವರ ಆರಾಧನೆ, ಗಂಜಿ, ಅನ್ನಸಂತರ್ಪಣೆಯಲ್ಲಿ ನೂರಾರು ಭಕ್ತರು ಭಾಗಿ**

# ಡಂಬಳದಲ್ಲಿ ಭಾವೈಕ್ಯದ ಮೊಹರಂ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ಡಂಬಳ



ಗದಗ ಜಿಲ್ಲೆಯ ಡಂಬಳ ಹೋಬಳಿಯಲ್ಲಿ ಮೊಹರಂ ಹಬ್ಬವು ಸೌಹಾರ್ದತೆ, ಏಕತೆ ಮತ್ತು ಭಾವೈಕ್ಯದ ಸಂಕೇತವಾಗಿ ಆಚರಿಸಲಾಗುತ್ತಿದೆ. ಹಿಂದೂ-ಮುಸ್ಲಿಮರು ಭೇದಭಾವ ಮರೆತು ಒಂದೇ ವೇದಿಕೆಯಲ್ಲಿ ಸೇರಿ ಶ್ರದ್ಧಾಭಕ್ತಿಯಿಂದ ಹಬ್ಬ ಆಚರಿಸುತ್ತಿದ್ದು, ಹೋಬಳಿ ಭಾಗದಲ್ಲಿ ಹಬ್ಬದ ಸಂಭ್ರಮ ಮನೆಮಾಡಿದೆ.

ಈಗಾಗಲೇ ವಿವಿಧೆಡೆ ಅಲಾಯಿ ದೇವರ ಪ್ರತಿಷ್ಠಾಪನೆಗೊಂಡಿವೆ. ವಿಶೇಷವೆಂದರೆ ಕೆಲವು ಗ್ರಾಮಗಳಲ್ಲಿ ಮುಸ್ಲಿಂ ಸಮುದಾಯದವರು ಇಲ್ಲದಿದ್ದರೂ ಹಿಂದೂ ಸಮುದಾಯದವರೇ ಸಂಪ್ರದಾಯಬದ್ಧವಾಗಿ ಮೊಹರಂ ಆಚರಿಸಿ ಅಲಾಯಿ ದೇವರನ್ನು ಪ್ರತಿಷ್ಠಾಪಿಸುತ್ತಾರೆ.

ಡಂಬಳ ಗ್ರಾಮದಲ್ಲಿ ಬೀಬಿಫಾತಿಮಾ, ಗೌಳಗೇರ ದೇವರು, ಕಾಸಿಂ ದೇವರು, ಚಾಂದಪೀರಾ, ಸರ್ಕಾವಾಸ ಹಾಗೂ ವಲ್ಲೇನವರ ಅಲಾಯಿ ದೇವರು ಸೇರಿದಂತೆ ಆರು ಕಡೆಗಳಲ್ಲಿ ಅಲಾಯಿ ದೇವರ ಪ್ರತಿಷ್ಠಾಪನೆ ಮಾಡಲಾಗಿದೆ. ಹೋಬಳಿಯ ಪೇಠ ಆಲೂರು, ಹಿರೇವಡ್ಡಟ್ಟಿ ಸೇರಿದಂತೆ ವಿವಿಧ ಗ್ರಾಮಗಳಲ್ಲೂ ಅಲಾಯಿ ದೇವರ ಆರಾಧನೆ ನಡೆಯುತ್ತಿದೆ.

ಪ್ರತಿ ವರ್ಷದಂತೆ ಗ್ರಾಮದ ಗೌಳಗೇರ ಅಲಾಯಿ ದೇವರ ನಿಮಿತ್ತ ಹಾಗೂ ದತ್ತರಶಾವಲಿ ದರ್ಗಾದ ಉರುಸು ಅಂಗವಾಗಿ ಮಂಗಳವಾರ ಗಂಜಿ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ನೂರಾರು ಭಕ್ತರು ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು.

ಮೊಹರಂ ಆಚರಣೆಯ ಹಿಂದಿರುವ ಕರ್ಬಲಾ ಯುದ್ಧದ ಇತಿಹಾಸವು ಇಸ್ಲಾಮಿನ ಮಹತ್ವದ ಅಧ್ಯಾಯವಾಗಿದೆ. ಪ್ರವಾದಿ ಮುಹಮ್ಮದ್ ಅವರ ಮೊಮ್ಮಗ ಹಜರತ್ ಇಮಾಮ್ ಹುಸೇನ್ ಅವರು ಅನ್ಯಾಯ ಮತ್ತು ವಂಶಾಡಳಿತದ ವಿರುದ್ಧ ಹೋರಾಡಿ ಕರ್ಬಲಾ ಯುದ್ಧದಲ್ಲಿ ಹುತಾತ್ಮರಾದ ಸ್ಮರಣಾರ್ಥ ಮೊಹರಂ ಆಚರಿಸಲಾಗುತ್ತದೆ. ಸತ್ಯ, ನ್ಯಾಯ ಮತ್ತು ತ್ಯಾಗದ ಸಂದೇಶವನ್ನು ಸಾರುವ ಈ ಹಬ್ಬಕ್ಕೆ ವಿಶೇಷ ಮಹತ್ವವಿದೆ.

ಮೊಹರಂ ಹಬ್ಬದ ಮತ್ತೊಂದು ವಿಶೇಷ ಆಕರ್ಷಣೆ ಹುಲಿವೇಷ. ಹರಕೆ ಹೊತ್ತ ಯುವಕರು ಹಾಗೂ ಮಕ್ಕಳು ಹುಲಿವೇಷ ಧರಿಸಿ ಅಲಾಯಿ ದೇವರ ಮುಂದೆ ಭಕ್ತಿ ಸಮರ್ಪಿಸುತ್ತಾರೆ. ಕೆಲವರು ಸಂಪ್ರದಾಯಕ್ಕಾಗಿ, ಇನ್ನು ಕೆಲವರು ಕಲಾ ಪ್ರದರ್ಶನ ಹಾಗೂ ಜೀವನೋಪಾಯಕ್ಕಾಗಿ ಹುಲಿವೇಷ ತೊಡುತ್ತಾರೆ.

ಅಲಾಯಿ ದೇವರಿಗೆ ಜಾತಿ-ಮತ ಭೇದವಿಲ್ಲದೆ ಭಕ್ತರು ಸಕ್ಕರೆ ನೈವೇದ್ಯ ಅರ್ಪಿಸುತ್ತಾರೆ. ಅನೇಕರು ಹರಕೆ ಹೊತ್ತು ದೀಡ್ ನಮಸ್ಕಾರ ಸಲ್ಲಿಸುತ್ತಾರೆ. ಕೆಲವು ಕಡೆ ಅನ್ನಸಂತರ್ಪಣೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುತ್ತವೆ.

ತಡರಾತ್ರಿ ಮಸೀದಿಯಿಂದ ಅಲಾಯಿ ದೇವರು ಹೊರಬಂದು ಭಕ್ತರಿಗೆ ದರ್ಶನ ನೀಡುವುದು ಮೊಹರಂ ಆಚರಣೆಯ ಪ್ರಮುಖ ಭಾಗವಾಗಿದೆ. ದೇವರ ಸವಾರಿಯನ್ನು ಕಣ್ತುಂಬಿಕೊಳ್ಳಲು ಸಾವಿರಾರು ಭಕ್ತರು ಕಾದು ಕುಳಿತುಕೊಳ್ಳುತ್ತಾರೆ. ಕೆಲವು ಕಡೆ ಅಗ್ನಿ ಪ್ರವೇಶ ಸೇರಿದಂತೆ ವಿವಿಧ ಧಾರ್ಮಿಕ ಆಚರಣೆಗಳು ನಡೆಯುತ್ತವೆ.

> "ಡಂಬಳ ಗ್ರಾಮ ಭಾವೈಕ್ಯತೆಯ ಪ್ರತೀಕವಾಗಿದೆ. ಮೊಹರಂ ಹಬ್ಬವನ್ನು ಹಿಂದೂ-ಮುಸ್ಲಿಮರು ಒಗ್ಗಟ್ಟಿನಿಂದ ಆಚರಿಸುತ್ತಾರೆ. ದತ್ತರಶಾವಲಿ ಉರುಸು ಹಾಗೂ ಗೌಳಗೇರ ಅಲಾಯಿ ದೇವರ ಕಾರ್ಯಕ್ರಮಗಳು ಗ್ರಾಮದಲ್ಲಿ ಸೌಹಾರ್ದತೆಯನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ."
> – **ಮಹಮ್ಮದ್ ರಫೀಕ್ ಅಲ್ಲಾವುದ್ದೀನ್**
> ಹೊಸಪೇಟಿ, ಹಿರಿಯರು, ಡಂಬಳ

**ತಾಲೂಕು ರೈತ ಸಂಘದಿಂದ ಸರ್ಕಾರಕ್ಕೆ ಮನವಿ**

# ವಿದ್ಯುತ್ ಖಾಸಗೀಕರಣ ಬೇಡ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ರಾಜ್ಯದಲ್ಲಿ ವಿದ್ಯುತ್ ಖಾಸಗೀಕರಣ ನೀತಿಯನ್ನು ಜಾರಿಗೆ ತರಲು ಮುಂದಾಗಿರುವ ಕ್ರಮವನ್ನು ವಿರೋಧಿಸಿ ತಾಲೂಕು ರೈತ ಸಂಘದ ನೇತೃತ್ವದಲ್ಲಿ ರೈತರು ಸೋಮವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ಉಪ ತಹಸೀಲ್ದಾರ್ ಶಿವಕುಮಾರ್ ಗೌಡ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ರೈತ ಸಂಘದ ಸಂಚಾಲಕ ಶಿಗೇನಹಳ್ಳಿ ಬಸವರಾಜ್, ವಿದ್ಯುತ್ ಖಾಸಗೀಕರಣದಿಂದ ರೈತರಿಗೆ ದೊರೆಯುತ್ತಿರುವ ಸೌಲಭ್ಯಗಳಿಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ. ಕೃಷಿ ಪಂಪ್‌ಸೆಟ್‌ಗಳಿಗೆ ನೀಡುತ್ತಿರುವ ಉಚಿತ ವಿದ್ಯುತ್ ಯೋಜನೆಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಬಾರದು ಹಾಗೂ ಗ್ರಾಮೀಣ ಭಾಗಗಳಿಗೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಪೂರೈಕೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ರೈತ ಸಂಘದ ಮುಖಂಡ ಟಿ. ಕೊಟ್ರೇಶ್ ಮಾತನಾಡಿ, ವಿದ್ಯುತ್ ಕ್ಷೇತ್ರವನ್ನು ಖಾಸಗಿ ಕಂಪನಿಗಳಿಗೆ ಒಪ್ಪಿಸಿದರೆ ರೈತರು ಹಾಗೂ ಸಾಮಾನ್ಯ ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ. ವಿದ್ಯುತ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಿ, ಹಳೆಯ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

ಮನವಿಯಲ್ಲಿ ವಿದ್ಯುತ್ ಖಾಸಗೀಕರಣ ನೀತಿಯನ್ನು ಹಿಂಪಡೆಯುವುದು, ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಯೋಜನೆಯನ್ನು ಮುಂದುವರಿಸುವುದು, ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಖಚಿತಪಡಿಸುವುದು, ವಿದ್ಯುತ್ ಅವಘಡಗಳಲ್ಲಿ ಮೃತಪಟ್ಟ ಹಾಗೂ ಗಾಯಗೊಂಡವರಿಗೆ ಸೂಕ್ತ ಪರಿಹಾರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಪ್ರಸ್ತಾಪಿಸಲಾಯಿತು.

ಈ ಸಂದರ್ಭದಲ್ಲಿ ನಾಗೇಶ್ ಸಿ., ನಾಗರಾಜ ತಳವಾರ, ಸೋಮು, ಮಾಬು, ಎಸ್.ಕೆ. ಸೋಮನಾಥ್, ಎಸ್.ಕೆ. ಮಹೇಶ್, ತಂಬ್ರಹಳ್ಳಿ ಮಹೇಶ್, ಮದ್ದಿ ದುರ್ಗಮ್ಮ ಸೇರಿದಂತೆ ತಾಲೂಕು ರೈತ ಸಂಘದ ಪದಾಧಿಕಾರಿಗಳು, ವಿವಿಧ ಗ್ರಾಮಗಳ ರೈತರು ಹಾಗೂ ರೈತ ಹೋರಾಟಗಾರರು ಉಪಸ್ಥಿತರಿದ್ದರು.

> "ವಿದ್ಯುತ್ ಖಾಸಗೀಕರಣ ರೈತರಿಗೆ ಮಾರಕವಾಗಲಿದೆ. ಉಚಿತ ವಿದ್ಯುತ್ ಯೋಜನೆ ಮತ್ತು ಗ್ರಾಮೀಣ ವಿದ್ಯುತ್ ಪೂರೈಕೆಯನ್ನು ಯಾವುದೇ ಕಾರಣಕ್ಕೂ ದುರ್ಬಲಗೊಳಿಸಬಾರದು."
> – **ಶಿಗೇನಹಳ್ಳಿ ಬಸವರಾಜ್,**
> ತಾಲೂಕು ರೈತ ಸಂಘದ ಸಂಚಾಲಕ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka